ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 170 RNI Number : KNKAN/25/A2770 28-06-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :170 ರಾಯಚೂರು 28-06-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಪ್ರೇಯಸಿ ಜೊತೆ ಕಾರಿನಲ್ಲಿ ಹೋಗುತ್ತಿರುವಾಗಲೇ ನಾಡಬಾಂಬ್ ಸ್ಫೋಟಿಸಿದ ಪ್ರಿಯಕರ

ತುಮಕೂರು, ಜೂ. 27

ಕಾರಿನಲ್ಲಿ ನಾಡಬಾಂಬ್ ( ) ಸ್ಫೋಟಿಸಿಕೊಂಡು ಯುವಕ ಆತ್ಮಹತ್ಯೆ () ಮಾಡಿಕೊಂಡಿರುವಂತ ಭೀಕರ ಘಟನೆಯೊಂದು ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಕಳ್ಳಂಬೆಳ್ಳ ಬಳಿ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಶನಿವಾರ ಮಧ್ಯಾಹ್ನ ನಡೆದಿದೆ. ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಮೂಲದ ನಾಗೇಂದ್ರ (30) ಆತ್ಮಹತ್ಯೆ ಮಾಡಿಕೊಂಡ ಯುವಕ. ಇನ್ನು ಈ ದುರಂತದಲ್ಲಿ ಅಪಹರಣಕ್ಕೊಳಗಾಗಿದ್ದ ಯುವತಿ ಹಾಗೂ ಕಾರು ಚಾಲಕ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸದ್ಯ ಸ್ಥಳಕ್ಕೆ ತುಮಕೂರು ಎಸ್‌ಪಿ ವೆಂಕಟ್ ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ಈ ವೇಳೆ ಮತ್ತೊಂದು ಜೀವಂತ ಬಾಂಬ್ ಪತ್ತೆ ಆಗಿದೆ.

ನಡೆದಿದ್ದೇನು?

ರಮ್ಯಾ ಹಾಗೂ ನಾಗೇಂದ್ರ ಇಬ್ಬರು ಅಂಕೋಲ ಮೂಲದವರು. ಬೆಂಗಳೂರಿನ ರಾಜೀವ್ ಗಾಂಧಿ ಆಸ್ಪತ್ರೆಯಲ್ಲಿ ರಮ್ಯಾ ಲ್ಯಾಬ್ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದರೆ, ನಾಗೇಂದ್ರ ಡೆಲಿವರಿ ಬಾಯ್ ಆಗಿದ್ದ. ಇಬ್ಬರು ಕಳೆದ ಏಳೆಂಟು ವರ್ಷದಿಂದ ಪರಸ್ಪರ ಪ್ರೀತಿಸುತ್ತಿದ್ದರು. ಆದರೆ ಮದುವೆ ವಿಚಾರವಾಗಿ ಇಬ್ಬರ ನಡುವೆ ಭಿನ್ನಾಭಿಪ್ರಾಯ ಮೂಡಿದ್ದು, ರಮ್ಯಾ ಮದುವೆಗೆ ನಿರಾಕರಿಸಿದ್ದಳು.

ರಮ್ಯಾಳನ್ನ ಬಲವಂತವಾಗಿ ಕಿಡ್ನ್ಯಾಪ್ ಮಾಡಿದ ನಾಗೇಂದ್ರ

ಇದರಿಂದ ಕೋಪಗೊಂಡಿದ್ದ ನಾಗೇಂದ್ರ, ತಾನೇ ಒಂದು ಬಾಡಿಗೆ ಕಾರನ್ನು ಬುಕ್ ಮಾಡಿಕೊಂಡು, ರಮ್ಯಾ ತಂಗಿದ್ದ ಬೆಂಗಳೂರಿನ ಪಿಜಿ ಬಳಿ ತೆರಳಿ ಆಕೆಯನ್ನು ಬಲವಂತವಾಗಿ ಅಪಹರಿಸಿದ್ದ. ನಾಗೇಂದ್ರ ಪ್ಲ್ಯಾನ್ ಮಾಡಿ ನಾಡಬಾಂಬ್ ತಯಾರಿಸಿಕೊಂಡು ತಂದಿದ್ದ ಎಂಬ ಮಾಹಿತಿ ಇದೆ. ರಮ್ಯಾ ನಾಪತ್ತೆ ಕುರಿತು ಆಕೆಯ ಸ್ನೇಹಿತೆ ತಕ್ಷಣವೇ ಸಿದ್ದಾಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾಳೆ.

ಇನ್ನು ರಮ್ಯಾಳನ್ನು ಕಿಡ್ನ್ಯಾಪ್ ಮಾಡಿದ್ದ ನಾಗೇಂದ್ರ ಶಿರಾ ರಸ್ತೆಯಲ್ಲಿ ತೆರಳುತ್ತಿದ್ದ. ಕಾರಿನಲ್ಲೇ ಇಬ್ಬರ ಮಧ್ಯೆ ತೀವ್ರ ಜಗಳ ನಡೆದಿದೆ. ಈ ವೇಳೆ ನಾಗೇಂದ್ರ ರಮ್ಯಾ ತಲೆಗೆ ಆಯುಧದಿಂದ ಹೊಡೆದಿದ್ದಾನೆ. ರಮ್ಯಾ ತಕ್ಷಣವೇ ಚಲಿಸುವ ಕಾರಿನಿಂದ ಹೊರಗೆ ಜಿಗಿದು ಜೀವ ಉಳಿಸಿಕೊಂಡಿದ್ದಾಳೆ. ಯುವತಿ ಕಾರಿನಿಂದ ಇಳಿದಾಗ ಚಾಲಕ ಸಹಾಯಕ್ಕೆ ತೆರಳಿದ್ದಾನೆ.

ಕಾರಿನೊಳಗೇ ಸಜೀವ ದಹನ

ಇದೇ ಸಮಯವನ್ನು ಬಳಸಿಕೊಂಡ ನಾಗೇಂದ್ರ, ಕಾರಿನ ಎಲ್ಲಾ ಡೋರ್‌ಗಳನ್ನು ಒಳಗಿನಿಂದ ಲಾಕ್ ಮಾಡಿಕೊಂಡು, ತಾನು ತಂದಿದ್ದ



ನಾಡಬಾಂಬ್ ಅನ್ನು ಸ್ಫೋಟಿಸಿಕೊಂಡಿದ್ದಾನೆ. ಸ್ಫೋಟದ ತೀವ್ರತೆಗೆ ಕಾರು ಸಂಪೂರ್ಣವಾಗಿ ಸುಟ್ಟುಕರಕಲಾಗಿದೆ. ನಾಗೇಂದ್ರ ಕಾರಿನೊಳಗೇ ಸಜೀವ ದಹನವಾಗಿದ್ದಾನೆ.

ಘಟನೆ ಬಗ್ಗೆ ಕಾರು ಚಾಲಕ ಪ್ರವೀಣ್ ಶಾಕಿಂಗ್ ಹೇಳಿಕೆ

ಇನ್ನು ಘಟನೆ ಬಗ್ಗೆ ಕಾರು ಚಾಲಕ ಪ್ರವೀಣ್ ಟಿವಿ9 ಜೊತೆಗೆ ಮಾತನಾಡಿದ್ದು, ಉಬರ್‌ನಲ್ಲಿ ನನಗೆ ನಾಗೇಂದ್ರ ಎಂಬ ಹೆಸರಿನಲ್ಲಿ ಕಾರ್ ಬುಕ್ ಆಗಿತ್ತು. ಬೆಳಿಗ್ಗೆ 11 ಗಂಟೆಗೆ ಜಯನಗರದಲ್ಲಿ ಇಬ್ಬರು ಒಟ್ಟಿಗೆ ಕಾರು ಹತ್ತಿದರು. ಕಳ್ಳಂಬೆಳ್ಳವರೆಗೂ ಯಾವುದೇ ಸಮಸ್ಯೆ ಇರಲಿಲ್ಲ. ಜೊತೆಗೆ ಅಂಕೋಲಾದಿಂದ ನನಗೆ ಕರೆ ಬಂದಿದ್ದು, ಇದು ಕಿಡ್ನ್ಯಾಪ್ ಅಂತ ಪೊಲೀಸರು ಮಾಹಿತಿ ಕೊಟ್ಟಿದ್ದರು. ಬಳಿಕ ಇಬ್ಬರ ನಡುವೆ ಗಲಾಟೆ ಆಗಿದೆ. ಆತ ಚಾಕುವಿನಿಂದ ಆಕೆಗೆ ಚುಚ್ಚಿದ್ದಾನೆ. ಆಗ ನಾನು ಕಾರು ರಸ್ತೆ ಪಕ್ಕಕ್ಕೆ ಹಾಕಿದೆ. ಯುವತಿ ರಕ್ಷಿಸುವುದು ನನ್ನ ಮೊದಲ ಆದ್ಯತೆ ಆಗಿತ್ತು. ಹೀಗಾಗಿ ರಕ್ಷಣೆ ಮಾಡಿ ಹೋಗುತ್ತಿದ್ದ ಬೈಕ್‌ಗೆ ಹತ್ತಿಸಿದೆ. ಈ ವೇಳೆ ಕಾರಿನಲ್ಲಿ ಬಾಂಬ್ ಇದೆ ಎಂದು ಹೇಳಿದ್ದಾಳೆ ಎಂದರು.

ನಂತರ ನಾನು ಕಾರು ಹತ್ತಿರ ಹೋದಾಗ ಯುವಕ ಒಂದು ಬಾಂಬ್ ಕೈನಲ್ಲಿ ಹಿಡಿದಿದ್ದ. ನಾನು ಅದನ್ನ ಕಿತ್ತು ಎಸೆದೆ. ನಂತರ ಮತ್ತೊಂದು ಬಾಂಬ್‌ಗೆ ಬೆಂಕಿ ಹಚ್ಚಲು ಮುಂದಾಗಿದ್ದು, ಆಗ ನಾನು ಅಲ್ಲಿಂದ ಓಡಿದೆ. ನಂತರ ಕಾರ್ ಬ್ಲಾಸ್ಟ್ ಆಗಿದೆ. ನನ್ನ ಹೆಂಡತಿಯ ಒಡವೆ ಅಡವಿಟ್ಟು ಕಾರು ಖರೀದಿ ಮಾಡಿದ್ದೇನೆ ಎಂದು ಕಾರು ಚಾಲಕ ಪ್ರವೀಣ್ ಹೇಳಿದ್ದಾರೆ.

ಸದ್ಯ ಪ್ರಕರಣ ಭಾರಿ ಆತಂಕಕ್ಕೆ ಕಾರಣವಾಗಿದೆ. ಬೆಂಗಳೂರಿನಿಂದ ಪರಿಶೀಲನಾ ತಂಡ ಆಗಮಿಸುತ್ತಿದೆ. ಘಟನೆಗೆ ಸಂಬಂಧಿಸಿದಂತೆ ಸಿದ್ದಾಪುರ ಮತ್ತು ಕಳ್ಳಂಬೆಳ್ಳ ಪೊಲೀಸರು ಜಂಟಿ ತನಿಖೆ ಮುಂದುವರಿಸಿದ್ದಾರೆ.

ರಾಯಚೂರಿನ ವಿವಿಧೆಡೆ ಮೊಹರಂ ಆಚರಣೆ



ರಾಯಚೂರು,ಜೂ.27-

ನಗರ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಮೊಹರಂ ಹಬ್ಬವನ್ನು ಹಿಂದೂ-ಮುಸ್ಲಿಂ ಬಾಂಧವರು ಭಾವೈಕ್ಯತೆಯಿಂದ ಆಚರಿಸಿ ಸೌಹಾರ್ದತೆಯ ಸಂದೇಶ ಸಾರಿದರು.

ನಗರದ ಎಲ್‌ಬಿಎಸ್ ನಗರ, ಪಟೇಲ್ ರಸ್ತೆ, ಮಡ್ಡಿಪೇಟೆ, ಬಸವನಭಾವಿ ರಸ್ತೆ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಇಮಾಮ್ ಹುಸೇನ್, ಇಮಾಮ್ ಹಸನ್, ಇಮಾಮ್ ಖಾಸಿಂ ಸೇರಿದಂತೆ ವಿವಿಧ ಪಂಜೆಗಳು (ಅಲಾಯಿ ದ'ೀವ'ರ'ು ಗ'ಳ'ು) ಪ್ರತಿಷ್ಠಾಪಿಸಲಾಗಿತ್ತು.

ಮೊಹರಂ ಹಬ್ಬದ ಹತ್ತನೇ ದಿನವಾದ ಶುಕ್ರವಾರ ಕತಲ್ ರಾತ್ರಿ ಅಂಗವಾಗಿ ನೂರಾರು ಭಕ್ತರು ಆಶುರಖಾನಾಗಳಿಗೆ ಭೇಟಿ ನೀಡಿ ದರ್ಶನ ಪಡೆದರು. ಹಿಂದೂ ಮತ್ತು ಮುಸ್ಲಿಂ ಸಮುದಾಯದವರು ಆಶುರಖಾನಾಗಳಿಗೆ ಆಗಮಿಸಿ ಪ್ರಾರ್ಥನೆ ಸಲ್ಲಿಸಿ ಭಕ್ತಿಭಾವ ಮೆರೆದರು.

ಭಕ್ತರು ಸಿಹಿ ಪಾನಕ ಹಾಗೂ ವಿವಿಧ ನೈವೇದ್ಯಗಳನ್ನು ತಂದು ಮುಜಾವರ್‌ಗಳ ಮೂಲಕ ವಿಶೇಷ ಪ್ರಾರ್ಥನೆ ಸಲ್ಲಿಸಿ ಸಾರ್ವಜನಿಕರಿಗೆ ಹಂಚಿದರು. ಅನೇಕ ಮುಸ್ಲಿಮರು ಮೊಹರಂನ ಒಂಬತ್ತನೇ ಹಾಗೂ ಹತ್ತನೇ ದಿನ ಉಪವಾಸ ಆಚರಿಸಿ ಸಂಜೆ ಉಪವಾಸ ಮುಕ್ತಾಯಗೊಳಿಸಿದರು.

ಇಸ್ಲಾಂ ಧರ್ಮದ ಪ್ರಕಾರ, ಇರಾಕ್‌ನ ಕರಬಲಾದಲ್ಲಿ ಪ್ರವಾದಿ ಮೊಹಮ್ಮದ್ ಅವರ ಮೊಮ್ಮಗ ಇಮಾಮ್ ಹುಸೇನ್ ಹಾಗೂ ಅವರ ಕುಟುಂಬದವರು ಧರ್ಮರಕ್ಷಣೆಗೆ ಹುತಾತ್ಮರಾದ ಸ್ಮರಣಾರ್ಥ

3ನೇ ಪುಟ.....

ಜಗತ್ತಿನ ಪ್ರಿಯನಗರ-ಕರುನಾಡ ಹೃದಯನಗರ ಬೆಗಳೂರಿನ ನಿರ್ಮಾತೃ ಕೆಂಪೇಗೌಡ ಪ್ರಸ್ತುತ ಆಡಳಿತಗಾರ : ಡಾ.ಕರಿಗೂಳಿ

ತಾಲೂಕಿನ ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ 27.06.2026ರಂದು ನಾಡದೊರೆ ಕೆಂಪೇಗೌಡ ಅವರ ಜಯಂತಿಯ ಆ'ಚ'ರಿ'ಸ'ಲಾ'ಯಿ'ತ'ು. ಪುಷ್ಪನಮನದ ಮೂಲಕ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಾಯಿತು.



ನಂತರ ಕಾಲೇಜಿನ ಪ್ರಾ'ಂಶ'ುಪಾ'ಲ'ರಾ'ದ' ಡಾ.ಕರಿಗೂಳಿ ಯವರು ಮಾತನಾಡಿ ವಿಜಯನಗರ ಸಾಮ್ರಾಜ್ಯದ ಅಡಿಯಲ್ಲಿ ಆಡಳಿತ ಮಾಡಿದ ಕೆಂಪೇಗೌಡ, ನಾಡುಕಟ್ಟಿದ ದೊರೆ ಹಾಗೂ ಜಾಗತಿಕ ನಗರವಾದ ಬೆಂಗಳೂರಿನ ನಿರ್ಮಾತೃ, ಹಾಗೂ ಅತ್ಯಂತ ದೂರದೃಷ್ಟಿಯ ನಾಯಕರಾಗಿದ್ದರು,ಅಂದು ಸುಮಾರು ಐದು ಲಕ್ಷ ಜನರು ವಾಸಿಸಲು ಅನುವಾಗುವಂತೆ ನಿರ್ಮಿಸಿದ ಬೆಂಗಳೂರು ಕೋಟಿಗಟ್ಟಲೆ ಜನರನ್ನು, ಜಗತ್ತಿನ ಎಲ್ಲಾ ರಾಷ್ಟ್ರಗಳನ್ನು ತನ್ನತ್ತ ಸೆಳೆಯುತ್ತಿದೆ, ಇಂದಿನ ಬೆಂಗಳೂರಿನ ಬೃಹದಾಕಾರದ ಈ ಬೆಳವಣಿಗೆಗೆ ಕೆಂಪೇಗೌಡರು ಅಂದು ಹಾಕಿದ ಭದ್ರಬುನಾದಿಯೇ ಕಾರಣ ಎಂದರು.

ಅವರು ಕೇವಲ ಆಡಳಿತಗಾರಷ್ಟೇ ಅಲ್ಲದೇ ಅಭಿವೃದ್ಧಿಯ ಹರಿಕಾರರು ಹೌದು, ಸಾವಿರಾರು ಕೆರೆಗಳನ್ನು ನಿರ್ಮಿಸಿ ಜಲಸಂಪನ್ಮೂಲ ಹಾಗೂ ನೀರಾವರಿಗೆ ಹೆಚ್ಚು ಒತ್ತು ನೀಡಿದ್ದರು, ಅಷ್ಟೇ ಅಲ್ಲದೇ ಅವರು ಸಮಾಜ ಸುಧಾರಕರು ಹೌದು, ಅಂದಿನ ಕಾಲದಲ್ಲಿ ಅವಿವಾಹಿತ ಮಹಿಳೆಯ ಕೈಬೆರಳುಗಳನ್ನು ಕತ್ತರಿಸುತ್ತಿದ್ದ ಅನಾಚಾರವನ್ನು ತಮ್ಮ ಆಡಳಿತ ಅವಧಿಯಲ್ಲಿ ರದ್ದು ಪಡಿಸಿದರು.

ಇಂದಿನ ಸಮಾಕಾಲೀನ ಅಭಿವೃದ್ಧಿ ಸಮಸ್ಯೆಗಳ ಪರಿಹಾರಕ್ಕೆ ಕೆಂಪೇಗೌಡರವರ ಆಡಳಿತ ಶೈಲಿ ಅನುಕರಣೀಯ ಎಂದರು.ಅಸಹಾಯಕ ಪ್ರಾಧ್ಯಾಪಕರಾದ ಅಡಾ.ವಿರುಪಾಕ್ಷ.ಕೆ, ಅವರು

ಬೋಸರಾಜಿಗೆ ಸಚಿವ ಸ್ಥಾನ ನೀಡಲೂ ಒತ್ತಾಯ

ರಾಯಚೂರು ಹಿಂದುಳಿದ ಒಕ್ಕೂಟ ಒತ್ತಾಯ

ರಾಯಚೂರು,ಜೂ.27-

ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರಿಗೆ ಮತ್ತೊಮ್ಮೆ ಸಚಿವ ಸ್ಥಾನ ನೀಡುವ ಮೂಲಕ ರಾಯಚೂರು ಜಿಲ್ಲೆಗೆ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಹಿಂದುಳಿದ ಒಕ್ಕೂಟ ಒತ್ತಾಯಿಸಿದೆ.



ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಕೆ. ಶಾಂತಪ್ಪ, ಎನ್.ಎಸ್. ಬೋಸರಾಜು ಅವರು ಕಾಂಗ್ರೆಸ್ ಪಕ್ಷವನ್ನು ಕಟ್ಟಿಬೆಳೆಸಿದ ಹಿರಿಯ ಹಾಗೂ ಅನುಭವಿ ನಾಯಕರು ಎಂದು ಹೇಳಿದರು. ಶಾಸಕರಾಗಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾಗಿ ಹಾಗೂ ಸಚಿವರಾಗಿ ಸೇವೆ ಸಲ್ಲಿಸಿರುವ ಅವರು ಜಿಲ್ಲೆಯ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ತೆಲಂಗಾಣ ಹಾಗೂ ಕೇರಳ ವಿಧಾನಸಭೆ ಚುನಾವಣೆಯಲ್ಲೂ ಪಕ್ಷದ ಸೂಚನೆಯಂತೆ ಕಾರ್ಯ ನಿರ್ವಹಿಸಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದಾರೆ. ಸಚಿವರಾಗಿದ್ದ ಅವಧಿಯಲ್ಲಿ ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ್ದು, ಇನ್ನಷ್ಟು ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡಲು ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯ ಎಂದು ಅಭಿಪ್ರಾಯಪಟ್ಟರು.

ಜಿಲ್ಲೆಯ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಸಾಮರ್ಥ್ಯ ಮತ್ತು ಆಡಳಿತ ಅನುಭವ ಹೊಂದಿರುವ ಬೋಸರಾಜು ಅವರಿಗೆ ಸಚಿವ ಸ್ಥಾನ ನೀಡಿದರೆ ಜಿಲ್ಲೆಗೆ ಹೆಚ್ಚಿನ ಪ್ರಯೋಜನವಾಗಲಿದೆ ಎಂದು ಅವರು ಒತ್ತಾಯಿಸಿದರು. ''ಅಭಿವೃದ್ಧಿ ನಿರಂತರ ವಾಗಬೇಕಾದರೆ ಬೋಸರಾಜುಗೆ ಸಚಿವ ಸ್ಥಾನ ನೀಡಬೇಕು'' ಎಂದು ಹಿಂದುಳಿದ ಒಕ್ಕೂಟ ಆಗ್ರಹಿಸಿತು. ಈ ಸಂದರ್ಭದಲ್ಲಿ ಕೆ.ಹನುಮಂತಪ್ಪ ಯಾದವ್ ,ವೈ ಜಯಂತರಾವ್ ಪತಂಗೆ ಜಿ. ಶಿವಮೂರ್ತಿ, ವಿ. ಲಕ್ಷ್ಮಿರೆಡ್ಡಿ , ಶ್ರೀನಿವಾಸ್ ಪತಂಗೆ , ಸುರೇಖಾ , ಗಾಯತ್ರಿ , ಗೋವಿಂದ ರಾಜ್ , ವಿಜಯ ಕುಮಾರ್ ಹೂಗಾರ್, ತಾಯಪ್ಪಗೌಡ ಇದ್ದರು

ಆಶಾ ಕಾರ್ಯಕರ್ತೆಯರ ಮುಷ್ಕರ ಮುಂದುವರಿಕೆ

ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಾತ್ರ ಭಾಗವಹಿಸಲು ತೀರ್ಮಾನ

ರಾಯಚೂರು,ಜೂ.27-

ಐದು ತಿಂಗಳ ಪ್ರೋತ್ಸಾಹಧನ ಹಾಗೂ ನಿಶ್ಚಿತ ಗೌರವಧನ ಪಾವತಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ (ಸಂಯೋಜಿತ) ನೇತೃತ್ವದಲ್ಲಿ ಜಿಲ್ಲೆಯಲ್ಲಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಕೆಲಸ ಬಂದ್ ಹೋರಾಟ ಮುಂದುವರಿಯಲಿದ್ದು, ದೇಶದ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಮುಂಬರುವ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಾತ್ರ ಪಾಲ್ಗೊಳ್ಳಲು ಆಶಾ ಕಾರ್ಯಕರ್ತೆಯರು ನಿರ್ಧರಿಸಿದ್ದಾರೆ.

ಈ ಸಂಬಂಧ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರಬಾಬು ಅವರ



ಸಮುಖದಲ್ಲಿ ನಡೆದ ಸಂಧಾನ ಸಭೆಯಲ್ಲಿ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆದು ಕೆಲವು ಭರವಸೆಗಳನ್ನು ಅಧಿಕಾರಿಗಳು ನೀಡಿದ್ದಾರೆ.

ಈಗಾಗಲೇ ಎರಡು ತಿಂಗಳ ಬಾಕಿ ವೇತನ ಪಾವತಿಯಾಗಿದ್ದು, ಮೇ ತಿಂಗಳ ಗೌರವಧನವನ್ನು ಸರ್ಕಾರಿ ಖಜಾನೆಗೆ ಕಳುಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ತಂಡ ಆಧಾರಿತ ಪ್ರೋತ್ಸಾಹಧನವನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ಭರವಸೆ ನೀಡಿದ್ದಾರೆ.

3ನೇ ಪುಟ.....

ರಾಯಚೂರು ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಒದಗಿಸಿ : ಮುಜಾಹಿದ್ ಮರ್ಚೆಡ್ ಆಗ್ರಹ

ರಾಯಚೂರು,ಜೂ.27-

ಈ ಬಾರಿ ಮುಂಗಾರು ಮಳೆಯ ಪ್ರಮಾಣವು ಸಾಮಾನ್ಯಕ್ಕಿಂತ ಕಡಿಮೆ ಇರುವುದು ಹವಾಮಾನ ಇಲಾಖೆ ಹಾಗೂ ಕೃಷಿ ಇಲಾಖೆಗೆ ಮೊದಲೇ ತಿಳಿದಿದ್ದರೂ, ರೈತರಿಗೆ ಅಗತ್ಯ ಮುನ್ನೆಚ್ಚರಿಕೆ, ಜಾಗೃತಿ ಮತ್ತು ವೈಜ್ಞಾನಿಕ ಕೃಷಿ ಸಲಹೆಗಳನ್ನು ನೀಡುವಲ್ಲಿ ಕೃಷಿ ಇಲಾಖೆ ಸಂಪೂರ್ಣ ವಿಫಲವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ಜಿಲ್ಲಾ ಕಾರ್ಯಾಧ್ಯಕ್ಷರಾದ ಮುಜಾಹಿದ್ ಮರ್ಚೆಡ್ ಆರೋಪಿಸಿದ್ದಾರೆ.



ಜಿಲ್ಲೆಯ ಸಾವಿರಾರು ರೈತರು ಸಾಲ ಮಾಡಿ ಬೀಜ, ಗೊಬ್ಬರ ಹಾಗೂ ಇತರೆ ಕೃಷಿ ಸಾಮಗ್ರಿಗಳನ್ನು ಖರೀದಿಸಿ ಬಿತ್ತನೆ ನಡೆಸಿದ್ದರು. ಆರಂಭದಲ್ಲಿ ಸುರಿದ ಅಲ್ಪ ಪ್ರಮಾಣದ ಮಳೆಯಿಂದ ಬೆಳೆಗಳು ಮೊಳಕೆಯೊಡೆದರೂ, ನಂತರ ಮಳೆಯ ಕೊರತೆಯಿಂದ ಸಸಿಗಳು ಒಣಗಿ ಹೋಗುತ್ತಿದ್ದು, ರೈತರು ಭಾರೀ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅನೇಕ ರೈತರು ಮರುಬಿತ್ತನೆಗೂ ಸಾಧ್ಯವಾಗದ ಸ್ಥಿತಿಯಲ್ಲಿದ್ದಾರೆ.

ಈ ಪರಿಸ್ಥಿತಿ ಉಂಟಾಗುವ ಸಾಧ್ಯತೆ ಮೊದಲೇ ತಿಳಿದಿದ್ದರೂ, ಯಾವ ಬೆಳೆಗಳನ್ನು ಬೆಳೆಯಬೇಕು, ಯಾವ ಬೀಜಗಳನ್ನು ಬಳಸಬೇಕು, ಮಣ್ಣಿನ ಪರೀಕ್ಷೆ, ಗೊಬ್ಬರದ ಸಮರ್ಪಕ ಬಳಕೆ, ಕೀಟನಾಶಕಗಳ ಬಳಕೆ, ನೀರಿನ ನಿರ್ವಹಣೆ ಹಾಗೂ ಹವಾಮಾನಕ್ಕೆ ಅನುಗುಣವಾದ ಕೃಷಿ ಪದ್ಧತಿಗಳ ಕುರಿತು ರೈತರಿಗೆ ಸಮರ್ಪಕ ಜಾಗೃತಿ ಮೂಡಿಸುವಲ್ಲಿ ಕೃಷಿ ಇಲಾಖೆ ಸಂಪೂರ್ಣ ವಿಫಲವಾಗಿದೆ. ಇದರಿಂದ ಸಾವಿರಾರು ರೈತರು ನಷ್ಟ ಅನುಭವಿಸುವಂತಾಗಿದೆ.

ವಿಶೇಷವಾಗಿ ಜಂಟಿ ಕೃಷಿ ನಿರ್ದೇಶಕ ಶ್ರೀ ಪ್ರಕಾಶ ಚೌಹಾಣ ಅವರ ಬೇಜವಾಬ್ದಾರಿತನ ಹಾಗೂ ನಿರ್ಲಕ್ಷ್ಯ ಈ ಪರಿಸ್ಥಿತಿಗೆ ಪ್ರಮುಖ ಕಾರಣವಾಗಿದೆ ಎಂದು ಮುಜಾಹಿದ್ ಮರ್ಚೆಡ್ ಆರೋಪಿಸಿದ್ದಾರೆ. ಇಲಾಖೆಯ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು

3ನೇ ಪುಟ.....

ಮಹಿಳೆಯ ಚೀಲದಲ್ಲಿದ್ದ 1.50 ಲಕ್ಷರೂ. ಎಗರಿಸಿದ ಇನ್ನೋರ್ವ ಮಹಿಳೆ

ರಾಯಚೂರು,ಜೂ.26-

ಮಹಿಳೆಯೊಬ್ಬರ ಗಮನ ಬೇರೆಡೆ ಸೆಳೆದು ಅವರ ಚೀಲದಲ್ಲಿದ್ದ 1.50 ಲಕ್ಷ ರೂ. ಎಗರಿಸಿರುವ ಘಟನೆ ಪಟ್ಟಣ ಜಿ.ಜಿ. ಕಾಂಪ್ಲೆಕ್ಸ್ ನ ಕಿರಾಣಿ ಅಂಗಡಿಯ ಮುಂಭಾಗದಲ್ಲಿ ನಡೆದಿರುವುದು ಬೆಳಕಿಗೆ ಬಂದಿದೆ.



ಕೋನಾಪುರಪೇಟೆ ಬಡಾವಣೆಯ ಮಹಿಳೆ ಹಣ ಕಳೆದುಕೊಂಡವರು. ಅವರು ಸ್ಥಳೀಯ ಬ್ಯಾಂಕಿನಿಂದ 1.50 ಲಕ್ಷ ರೂ. ಡ್ರಾ ಮಾಡಿಕೊಂಡು ಜಿ.ಜಿ. ಕಾಂಪ್ಲೆಕ್ಸ್ ಅಂಗಡಿಗೆ ಬಂದಿದ್ದರು. ಆ ಸಂದರ್ಭದಲ್ಲಿ ಅವರ ಗಮನ ಬೇರೆಡೆ ಸೆಳೆದು ಚೀಲದಲ್ಲಿದ್ದ ಹಣವನ್ನು ಮಹಿಳೆಯೊಬ್ಬಳು ಎಗರಿಸಿ ಪರಾರಿಯಾಗಿದ್ದಾರೆ. ಬ್ಯಾಂಕಿನಿಂದಲೇ ಮಹಿಳೆಯನ್ನು ಹಿಂಬಾಲಿಸಿಕೊಂಡು ಬಂದಿದ್ದ ಕಳ್ಳ ಮಹಿಳೆ ಸೂಕ್ತ ಸಮಯಕ್ಕಾಗಿ ಕಾದು ಈ ಕೃತ್ಯ ಎಸಗಿದ್ದಾಳೆ. ಈ ಎಲ್ಲ ಘಟನೆಯ ದೃಶ್ಯಾವಳಿಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಈ ಬಗ್ಗೆ ಪೊಲೀಸ್ ದೂರು ದಾಖಲಾಗಿದೆ.

3ನೇ ಪುಟ.....

ಕೊಪ್ಪಳ: ರಾಷ್ಟ್ರೀಯ ಹೆದ್ದಾರಿ 63ರಲ್ಲಿ ಭೀಕರ ರಸ್ತೆ ಅಪಘಾತ, ಐವರ ಸಾವು

ಕೊಪ್ಪಳ: ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಭಾನಾಪೂರ ಸಮೀಪದ ರಾಷ್ಟ್ರೀಯ ಹೆದ್ದಾರಿ 63ರಲ್ಲಿ ಶನಿವಾರ ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಐವರು ಮೃತಪಟ್ಟಿದ್ದು, ಇಬ್ಬರ ಸ್ಥಿತಿ ಗಂಭೀರವಾಗಿದೆ.

ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ ತಾಲೂಕಿನ ಕಬ್ಬಾರ್ ಗ್ರಾಮದ ನಿವಾಸಿಗಳು ಓಮಿನಿ ವಾಹನದಲ್ಲಿ ಮಂತ್ರಾಲಯಕ್ಕೆ ತೆರಳುತ್ತಿದ್ದ ವೇಳೆ, ಪಕ್ಕದ ರಸ್ತೆಯಲ್ಲಿ ಸಂಚರಿಸುತ್ತಿದ್ದ ಅಶೋಕ್ ಲೇಲ್ಯಾಂಡ್ ಲಾರಿ ನಿಯಂತ್ರಣ ತಪ್ಪಿ ಡಿವೈಡರ್ ದಾಟಿ ಎದುರು ಬರುತ್ತಿದ್ದ ಓಮಿನಿ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ.

ಅಪಘಾತಕ್ಕೀಡಾದ ಗೂಡ್ಸ್ ವಾಹನ ( )

ಅಪಘಾತದಲ್ಲಿ ಕೆಂಚಮ್ಮ ಬಾಳೆಕಾಯಿ (35), ಅಮೃತಾ ಕೊಟ್ಯಾಳ್ (25), ರಮೇಶ್ ಬಳ್ಳಾರಿ (45) ಹಾಗೂ ಪ್ರವೀಣ್ ಬಾಳೆಕಾಯಿ (23) ಸ್ಥಳದಲ್ಲೇ ಮೃತಪಟ್ಟರೆ, ತೀವ್ರವಾಗಿ ಗಾಯಗೊಂಡಿದ್ದ ಚಿನ್ಮಯ (30) ಎಂಬುವರು ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ.

ಅಪಘಾತದಲ್ಲಿ ಗಾಯಗೊಂಡ ಆರು ಮಂದಿಯನ್ನು ಕೊಪ್ಪಳ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದೆ. ಘಟನಾ ಸ್ಥಳಕ್ಕೆ ಕುಕನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

ಸಂಸದ ಬಸವರಾಜ ಬೊಮ್ಮಾಯಿ ಸಂತಾಪ: ಕೊಪ್ಪಳ ಜಿಲ್ಲೆಯ ಭಾನಾಪುರ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮಂತ್ರಾಲಯ ದರ್ಶನಕ್ಕೆ ತೆರಳುತ್ತಿದ್ದವರ ಸಾವು - ನೋವು ಸುದ್ದಿ ಅತ್ಯಂತ ನೋವುಂಟು ಮಾಡಿದೆ. ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ ತಾಲೂಕಿನ ಕೆಲವರು ಮೃತಪಟ್ಟು , ಹಲವರು ಗಾಯಗೊಂಡಿರುವ ಮಾಹಿತಿ ಇದೆ. ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಅವರ

3ನೇ ಪುಟ.....

ವಿದ್ಯುತ್ ಖಾಸಗೀಕರಣ ವಿರೋಧಿಸಿ ಕಿಸಾನ್ ಸಭಾ ಪ್ರತಿಭಟನೆ



ಆಳಂದ,ಜೂ.27-

ಜನವಿರೋಧಿ ವಿದ್ಯುತ್ ಖಾಸಗೀಕರಣ ನೀತಿಯನ್ನು ತಕ್ಷಣ ಹಿಂಪಡೆಯಬೇಕು, ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಬರಗಾಲ ಘೋಷಣೆ ಮಾಡಬೇಕು ಹಾಗೂ ಅಸಂಘಟಿತ ಕೃಷಿ ಕೂಲಿ ಕಾರ್ಮಿಕರು ಮತ್ತು ದಿನಗೂಲಿ ನೌಕರರ ವೇತನವನ್ನು ಹೆಚ್ಚಿಸಬೇಕು ಎಂದು ಆಗ್ರಹಿಸಿ ಅಖಿಲ ಭಾರತ ಕಿಸಾನ್ ಸಭಾ ಹಾಗೂ ಭಾರತೀಯ ಕ್ಷೇತ್ರ ಮಜದೂರ ಯೂನಿಯನ್ ಮುಖಂಡರು ಗುರುವಾರ ಪ್ರತಿಭಟನೆ ನಡೆಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಿದ ಮುಖಂಡರು, ಬಳಿಕ ತಹಸೀಲ್ದಾರ್ ಅಣ್ಣಾರಾವ್ ಪಾಟೀಲ್ ಅವರ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಅಖಿಲ ಭಾರತ ಕಿಸಾನ್ ಸಭಾದ ರಾಜ್ಯ ಕಾರ್ಯಾಧ್ಯಕ್ಷ ಹಾಗೂ ಜಿಲ್ಲಾ ಅಧ್ಯಕ್ಷ ಭೀಮಶಂಕರ ಮಾಡಿಯಾಳ, ವಿದ್ಯುತ್ ಖಾಸಗೀಕರಣದಿಂದ ಜನಸಾಮಾನ್ಯರು ಮತ್ತು ರೈತರು ಹೆಚ್ಚಿನ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈಗಾಗಲೇ ಬೆಳೆ ನಷ್ಟ, ಸಾಲದ ಹೊರೆ ಮತ್ತು ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ವಿದ್ಯುತ್ ಖಾಸಗೀಕರಣ ಜಾರಿಯಾದರೆ ಅವರ ಮೇಲಿನ ಹೊರೆ ಮತ್ತಷ್ಟು ಹೆಚ್ಚಲಿದೆ ಎಂದು ಅವರು ಹೇಳಿದರು.

ಕಳೆದ ವರ್ಷ ಅತಿವೃಷ್ಟಿ ಹಾಗೂ ಈ ವರ್ಷ ಮಳೆಯ ಅಭಾವದಿಂದ ರೈತರು ಸಂಕಷ್ಟದಲ್ಲಿದ್ದಾರೆ. ಸರ್ಕಾರ ತಕ್ಷಣ ಬರಗಾಲ ಘೋಷಿಸಿ, ರೈತರ ಬ್ಯಾಂಕ್ ಸಾಲ ಮನ್ನಾ ಮಾಡುವುದರ ಜೊತೆಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ವಿದ್ಯುತ್ ಬಿಲ್ ಪಾವತಿಸಲು ಸಹ ರೈತರು ಪರದಾಡುತ್ತಿರುವ ಸಂದರ್ಭದಲ್ಲಿ ವಿದ್ಯುತ್ ಖಾಸಗೀಕರಣ ಜಾರಿಗೆ ತರುವುದು ರೈತ ವಿರೋಧಿ ಕ್ರಮವಾಗಿದ್ದು, ಅದನ್ನು ಕೂಡಲೇ ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದರು.

ಮನವಿಯಲ್ಲಿ ವಿದ್ಯುತ್ ಖಾಸಗೀಕರಣವನ್ನು ಹಿಂಪಡೆಯುವುದು, 2025-26ನೇ ಸಾಲಿನ ರೈತರ ಬೆಳೆ ವಿಮೆ ಹಣವನ್ನು ತಕ್ಷಣ ಬಿಡುಗಡೆ ಮಾಡುವುದು ಹಾಗೂ ಅಸಂಘಟಿತ ಕೃಷಿ ಕೂಲಿ ಕಾರ್ಮಿಕರು ಮತ್ತು ದಿನಗೂಲಿ ನೌಕರರ ವೇತನವನ್ನು ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿರಿಸಲಾಗಿದೆ.

ಇದೇ ವೇಳೆ, ಆಳಂದ ತಾಲೂಕಿನ ಜಲ್ ಜೀವನ್ ಮಿಷನ್ (ಜೆಜೆಎಂ) ಕಾಮಗಾರಿಗಳಿಗೆ ಕೋಟ್ಯಂತರ ರೂಪಾಯಿ ವೆಚ್ಚ ಮಾಡಿದ್ದರೂ ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ. ಕಾಮಗಾರಿಗಳ ಗುಣಮಟ್ಟದ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಕಳೆದ ಎರಡು ತಿಂಗಳಿನಿಂದ ಸತ್ಯಾಗ್ರಹ ನಡೆಸಿದರೂ ಸರ್ಕಾರದಿಂದ ಯಾವುದೇ ಸ್ಪಂದನೆ ದೊರೆತಿಲ್ಲ. ಬೇಡಿಕೆಗಳಿಗೆ ಶೀಘ್ರ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕಿಸಾನ್ ಸಭಾ ತಾಲೂಕು ಅಧ್ಯಕ್ಷ, ಧರ್ಮಣ್ಣ ಪೂಜಾರಿ, ಕಾರ್ಯಧ್ಯಕ್ಷ ಮಹಾದೇವ ಮಂಟಗಿ, ರೈತ ಕಲ್ಯಾಣಿ ಆವಟೆ ವೈಜನಾಥ್ ಬುರಾಣಿ ಪುರೆ ಕಲ್ಯಾಣಿ ತಡಕಲ್ ಆಸ್ಪಾಕ್ ಮುಲ್ಲಾ ದತ್ತಾತ್ರೇ ಕಬಾಡಿ ನಗರ ಕಾರ್ಯದರ್ಶಿ ಸಾಜಿದರ್ ಅಲಿ ಕುಮಾರ್ ಬಿರಾಜದಾರ್ ಕೊರಳ್ಳಿ ಕಲ್ ಶೆಟ್ಟಿ ಸೇರಿದಂತೆ ಕಿಸಾನ್ ಸಭಾ ಮತ್ತು ಮಜದೂರ ಯೂನಿಯನ್‌ನ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಚಿಂಚೋಳಿಯಲ್ಲಿ ಭಾವೈಕ್ಯತೆಯ ಮೊಹರಂ ಆಚರಣೆ

ಚಿಂಚೋಳಿ,ಜೂ.27-

ತಾಲೂಕಿನಾದ್ಯಂತ ಮುಸ್ಲಿಂ ಹಾಗೂ ಹಿಂದೂ ಬಾಂಧವರು ಒಗ್ಗಟ್ಟಿನಿಂದ ಭಾಗವಹಿಸುವ ಮೂಲಕ ಮೊಹರಂ (ಪೀರ ಹಬ್ಬ)ವನ್ನು ಶ್ರದ್ಧಾಭಕ್ತಿ, ಸಡಗರ ಹಾಗೂ ಭಾವೈಕ್ಯತೆಯ ವಾತಾವರಣದಲ್ಲಿ ಆಚರಿಸಿದರು.

ನಗರ ಪ್ರದೇಶ ಸೇರಿದಂತೆ ಐನಾಪುರ, ಕರಕಮುಕಲಿ, ಕುಂಚಾವರಂ, ಸುಲೇಪೇಟ್, ಕೊಡ್ಲಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮೊಹರಂ ನಿಮಿತ್ತ ಪ್ರತಿಷ್ಠಾಪಿಸಲಾಗಿದ್ದ ಪೀರ ದೇವರಿಗೆ ಸಾರ್ವಜನಿಕರು ವಿಶೇಷ ಪೂಜೆ, ನೈವೇದ್ಯ ಹಾಗೂ ಧೂಪ-ದೀಪ ಬೆಳಗಿ ಭಕ್ತಿ ಸಮರ್ಪಿಸಿದರು.

ಚಿಂಚೋಳಿ ತಾಲೂಕಿನ ಮೊಹರಂ ಆಚರಣೆಯ ವಿಶೇಷತೆಯೆಂದರೆ, ಮುಸ್ಲಿಂ ಸಮುದಾಯದವರ ಜೊತೆಗೆ ಹಿಂದೂ ಸಮುದಾಯದವರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪೀರ ದೇವರಿಗೆ ಹರಕೆ ಹೊತ್ತು ಭಕ್ತಿಭಾವ ವ್ಯಕ್ತಪಡಿಸಿದರು. ಜಾತಿ-ಮತ ಭೇದ ಮರೆತು ಎಲ್ಲರೂ ಒಟ್ಟಾಗಿ ಹಬ್ಬ ಆಚರಿಸುವ ಮೂಲಕ ತಾಲೂಕಿನಲ್ಲಿ ಸೌಹಾರ್ದತೆಯ ವಾತಾವರಣ ಮನೆಮಾಡಿತ್ತು.

ಹಬ್ಬದ ಅಂಗವಾಗಿ ರಾತ್ರಿ ಜಾಗರಣೆ ನಡೆಸಿ, ಕೆಂಡದ ಹೊಂಡ (ಆಲಾವಿ) ಸುತ್ತ ಯುವಕರು ಹಾಗೂ ಹಿರಿಯರು ಡೋಲಿನ ನಾದಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಾ ಹುಸೇನ್ ದೂಲಾ ಎಂದು ಜಯಘೋಷ ಕೂಗಿದ ದೃಶ್ಯಗಳು ನೆರೆದಿದ್ದ ಸಾರ್ವಜನಿಕರ ಗಮನ ಸೆಳೆದವು.

ಮೊಹರಂ ಹಬ್ಬದ ಕೊನೆಯ ದಿನ ವಿವಿಧ ಪೀರ ದೇವಸ್ಥಾನಗಳಿಂದ ಪಂಜಾಗಳನ್ನು ಭವ್ಯ ಮೆರವಣಿಗೆಯ ಮೂಲಕ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಬಳಿಕ ಸಮೀಪದ ಜಲಮೂಲಗಳಲ್ಲಿ ವಿಸರ್ಜನೆ ಮಾಡುವ ಮೂಲಕ ಹಬ್ಬಕ್ಕೆ ತೆರೆ ಎಳೆಯಲಾಯಿತು. ಹಬ್ಬದ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿತ್ತು. ಈ ಸಂಧರ್ಭದಲ್ಲಿ ಬಡಿದರ್ಗಾದ ಸಜ್ಜದೆ ನಶೀನ್ ಸೈಯದ್ ಶಾಹ ಅಕ್ಬರ್ ಹುಸೈನಿ, ಹಿರಿಯ ಮುಖಂಡ ಕೆ ಎಂ ಬಾರಿ, ಗೋಪಾಲರಾವ ಕಟೀಮನಿ, ಗೌತಮ್ ಪಾಟೀಲ್, ಎಸ್ ಕೆ ಮುಖತಿಯರ್ ಮೊಖದುಮ್ ಖಾನ್, ಅಬದುಲ ಹಾದಿ, ಬಸವರಾಜ ಶಾಬಾದ, ಸಲೀಮ್ ಸೌಧಗರ, ನರಸಪ್ಪ, ಅಯೂಬ್ ಖಾನ್, ಹಾಸನ ಹಾಶ್ಮಿ, ಸೇರಿದಂತೆ ತಾಲೂಕಿನ ಸುತ್ತಮುತ್ತ ಹಳ್ಳಿಯ ಭಕ್ತರು ಸಾಕ್ಷಿಯಾದರು.



ಹರಪನಹಳ್ಳಿಯಲ್ಲಿ ಭಾವೈಕ್ಯತೆಯ ಮೊಹರಂ ಆಚರಣೆ

ಹರಪನಹಳ್ಳಿ,ಜೂ.27-

ಹಿಂದು-ಮುಸ್ಲಿಂ ಭಾವೈಕ್ಯತೆಯ ಸಂಕೇತವಾಗಿರುವ ಮೊಹರಂ ಹಬ್ಬವನ್ನು ನಗರದಲ್ಲಿ ಸರ್ವಧರ್ಮೀಯರು ಶುಕ್ರವಾರ ಶ್ರದ್ಧಾ-ಭಕ್ತಿಯಿಂದ ಆಚರಿಸಿದರು.

ಮೊಹರಂ ಹಬ್ಬದ ಕೊನೆಯ ದಿನವಾದ ಶುಕ್ರವಾರ ನಗರದ ವಿವಿಧ ಮಸೀದಿಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ ಪೀರ ದೇವರುಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಪೀರ ದೇವರುಗಳ ಭವ್ಯ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು.

ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ಭಕ್ತಿಭಾವ ಮೆರೆದರು. ಹರಿಹರ ವೃತ್ತದ ಸಮೀಪದ ಹಿರೇಕೆರೆಯಲ್ಲಿ ಪೀರ ದೇವರುಗಳ ವಿಸರ್ಜನೆ ನೆರವೇರಿಸಲಾಯಿತು. ಈ ವೇಳೆ ಭಕ್ತರು ಲೋಬಾನ ಹಾಗೂ ಲಾಡುಗಳನ್ನು ಅರ್ಪಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಹಬ್ಬವು ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದೆ ನಗರದಲ್ಲಿ ಮೊಹರಂ ಹಬ್ಬವನ್ನು ಶಾಂತಿಯುತ ಹಾಗೂ ಸೌಹಾರ್ದಯುತ ವಾತಾವರಣದಲ್ಲಿ ಆಚರಿಸಲಾಯಿತು.

ಗ್ರಾಮ ಪಂಚಾಯತ್ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡಿ: ಸಿಇಒ ರಾಹುಲ್ ಸಂಕನೂರ ಸೂಚನೆ

ಆಳಂದ,ಜೂ.27-

ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡುವುದರೊಂದಿಗೆ ಸರ್ಕಾರದ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ರಾಹುಲ್ ಸಂಕನೂರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕ್ಲರ್ಕ್-ಕಂ-ಡಾಟಾ ಎಂಟ್ರಿ ಆಪರೇಟರ್ ಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವಿವಿಧ ಯೋಜನೆಗಳ ಪ್ರಗತಿ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಅಡಿಯಲ್ಲಿ ಮಾನವ ದಿನಗಳ ಸೃಜನೆ, ಇ-ಕೆವೈಸಿ ಪ್ರಗತಿ,



ಇ-ಎಫ್‌ಎಂಎಸ್, ತೆರಿಗೆ ವಸೂಲಾತಿ, ಸ್ವಚ್ಛ ಭಾರತ ಮಿಷನ್ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ವೇತನ ಪಾವತಿ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಯಿತು.

ಪ್ರತಿ ಗ್ರಾಮ ಪಂಚಾಯಿತಿಯ ಪ್ರಗತಿ ವರದಿಯನ್ನು ಪರಿಶೀಲಿಸಿದ ಸಿಇಒ, ನಿಗದಿತ ಗುರಿ ಸಾಧನೆಗೆ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ವಿಶೇಷವಾಗಿ ನರೇಗಾ ಯೋಜನೆಯಡಿ ಹೆಚ್ಚಿನ ಮಾನವ ದಿನಗಳನ್ನು ಸೃಜಿಸಿ ಗ್ರಾಮೀಣ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿ ಹೆಚ್ಚಿಸುವುದು, ಕುಡಿಯುವ ನೀರಿನ ಗುಣಮಟ್ಟದ ಮೇಲ್ವಿಚಾರಣೆ ಹಾಗೂ ಸ್ವಚ್ಛ ಭಾರತ ಮಿಷನ್ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸಿಬ್ಬಂದಿಗಳ ವೇತನ ಪಾವತಿಯಲ್ಲಿ ಯಾವುದೇ ವಿಳಂಬ ಉಂಟಾಗದಂತೆ ನೋಡಿಕೊಳ್ಳಬೇಕೆಂದರು.

ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವಂತೆ ಸೂಚಿಸಿದ ಅವರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡದೆ ಜನರ ಕರೆಗಳಿಗೆ ಸ್ಪಂದಿಸಬೇಕು ಎಂದು ಹೇಳಿದರು.

ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸದ ಹಾಗೂ ಸಭೆಗೆ ಗೈರುಹಾಜರಾದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡುವಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು. ಪ್ರತಿ ಬುಧವಾರ ತಾಲೂಕು ಪಂಚಾಯಿತಿಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಗುರಿ ಸಾಧನೆಗೆ ಕ್ರಮ ಕೈಗೊಳ್ಳುವಂತೆಯೂ ನಿರ್ದೇಶನ ನೀಡಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ, ಜಿಲ್ಲಾ ಪಂಚಾಯಿತಿ ಎಇಇ ಸಂಗಮೇಶ, ಗ್ರಾಮೀಣ ಉದ್ಯೋಗ ಯೋಜನೆಯ ಸಹಾಯಕ ನಿರ್ದೇಶಕರು, ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕರು, ವ್ಯವಸ್ಥಾಪಕರು, ತಾಲೂಕಿನ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ನರೇಗಾ ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು ಹಾಗೂ ಡಾಟಾ ಎಂಟ್ರಿ ಆಪರೇಟರ್‌ಗಳು ಉಪಸ್ಥಿತರಿದ್ದರು.

ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ : ಪೊಲೀಸ್ ಕಮಿಷನರ್ ಡಾ. ಶರಣಪ್ಪ ಎಸ್.ಡಿ.



ಕಲಬುರಗಿ,ಜೂ.27-

ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಮಾದಕ ವಸ್ತುಗಳ ಕಳ್ಳಸಾಗಣೆ ವಿರೋಧಿ ದಿನದ ಅಂಗವಾಗಿ ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ವತಿಯಿಂದ ಶುಕ್ರವಾರ ನಗರದಲ್ಲಿ ಡ್ರಗ್ಸ್ ವಿರೋಧಿ ಜಾಗೃತಿ ವಾಕ್‌ಥಾನ್ ಆಯೋಜಿಸಿ, ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು.

ನಗರದ ಜಗತ್ ವೃತ್ತದಿಂದ ಆರಂಭವಾದ ವಾಕ್‌ಥಾನ್ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದವರೆಗೆ ಸಂಚರಿಸಿತು. ಪೊಲೀಸ್ ಅಧಿಕಾರಿಗಳು,

ವೈದ್ಯರು, ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಉತ್ಸಾಹದಿಂದ ಪಾಲ್ಗೊಂಡು, ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣದ ಸಂದೇಶ ಸಾರಿದರು.

ವಾಕ್‌ಥಾನ್‌ಗೆ ಚಾಲನೆ ನೀಡಿ ಮಾತನಾಡಿದ ಕಲಬುರಗಿ ನಗರ ಪೊಲೀಸ್ ಕಮಿಷನರ್ ಡಾ. ಶರಣಪ್ಪ ಎಸ್.ಡಿ., ಮಾದಕ ದ್ರವ್ಯ ವ್ಯಸನವು ಯುವಜನರ ಭವಿಷ್ಯವನ್ನು ಹಾಳು ಮಾಡುವ ಗಂಭೀರ ಸಾಮಾಜಿಕ ಪಿಡುಗಾಗಿದ್ದು, ಇದರ ನಿರ್ಮೂಲನೆಗೆ ಪೊಲೀಸ್ ಇಲಾಖೆ ಮಾತ್ರವಲ್ಲದೆ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕಾಗಿದೆ ಎಂದು ಹೇಳಿದರು.

ಯುವಕರು ಮಾದಕ ವ್ಯಸನ ಹಾಗೂ ಇತರೆ ದುಶ್ಚಟಗಳಿಂದ ದೂರವಿದ್ದು, ಶಿಕ್ಷಣ, ಕ್ರೀಡೆ, ಕೌಶಲ್ಯಾಭಿವೃದ್ಧಿ ಮತ್ತು ಸೃಜನಾತ್ಮಕ ಚಟುವಟಿಕೆಗಳತ್ತ ಹೆಚ್ಚಿನ ಗಮನ ಹರಿಸಬೇಕು. ಪೋಷಕರು, ಶಿಕ್ಷಕರು ಹಾಗೂ ಸಮಾಜದ ಎಲ್ಲ ವರ್ಗದವರು ಯುವಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಡ್ರಗ್ಸ್ ವಿರುದ್ಧದ ಹೋರಾಟವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಮಾದಕ ವಸ್ತುಗಳ ದುರುಪಯೋಗವನ್ನು ತಡೆಗಟ್ಟಲು ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದ್ದು, ಅನುಮಾನಾಸ್ಪದ ಚಟುವಟಿಕೆಗಳ ಬಗ್ಗೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡುವ ಮೂಲಕ ಸುರಕ್ಷಿತ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಅಧೀಕ್ಷಕ ಅದ್ದೂರು ಶ್ರೀನಿವಾಸಲು, ಡಿಸಿಪಿ ಶಾಲೂ ಸೇರಿದಂತೆ ನಗರ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು, ವೈದ್ಯರು, ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ವಿವಿಧೆಡೆ ದಾಳಿ : ಇಬ್ಬರು ಬಾಲಕಾರ್ಮಿಕ ಮಕ್ಕಳ ರಕ್ಷಣೆ

ಸಂಡೂರು,ಜೂ.27-

ತಾಲೂಕಿನ ಚೋರನೂರು ಹೋಬಳಿ ವ್ಯಾಪ್ತಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಜಂಟಿ ಆಶ್ರಯದಲ್ಲಿ ಗುರುವಾರ ಹಠಾತ್ ದಾಳಿ ನಡೆಸಿ, ಇಬ್ಬರು ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

ಚೋರನೂರು ಹೋಬಳಿ ವ್ಯಾಪ್ತಿಯ ಸುಮಾರು 25 ಉದ್ದಿಮೆಗಳು ಹಾಗೂ ಅಂಗಡಿ-ಮುಂಗಟ್ಟುಗಳ ಮೇಲೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯರು ಜಂಟಿಯಾಗಿ ದಾಳಿ ನಡೆಸಿದರು. ಈ ವೇಳೆ ಕಾನೂನುಬಾಹಿರವಾಗಿ ಕೆಲಸ ಮಾಡುತ್ತಿದ್ದ ಇಬ್ಬರು ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಪತ್ತೆಹಚ್ಚಿ, ಅವರನ್ನು ಕೆಲಸದಿಂದ ಮುಕ್ತಗೊಳಿಸಲಾಯಿತು.

ರಕ್ಷಿಸಲ್ಪಟ್ಟ ಮಕ್ಕಳನ್ನು ಅವರು ಈ ಹಿಂದೆ ವ್ಯಾಸಂಗ ಮಾಡುತ್ತಿದ್ದ ಶಾಲೆಗಳಿಗೆ ಮರು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ. ಮಕ್ಕಳ ವಯಸ್ಸಿನ ದಾಖಲೆಗಳನ್ನು ಪರಿಶೀಲಿಸಿರುವ ಅಧಿಕಾರಿಗಳು, ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಂಡಿದ್ದ ಮಾಲೀಕರ ವಿರುದ್ಧ ಸಂಬಂಧಿತ ಪೊಲೀಸ್ ಠಾಣೆಗಳಲ್ಲಿ ಬಾಲಕಾರ್ಮಿಕ ಕಾಯ್ದೆಯಡಿ ಪ್ರಕರಣ ದಾಖಲಿಸಲು ಮುಂದಾಗಿದ್ದಾರೆ.



ಇದೇ ವೇಳೆ, ಅಂಗಡಿ ಹಾಗೂ ಉದ್ದಿಮೆಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಯಾವುದೇ ಕಾರಣಕ್ಕೂ ಕೆಲಸಕ್ಕೆ ನೇಮಿಸಿಕೊಳ್ಳಬಾರದು ಎಂದು ಮಾಲೀಕರಿಗೆ ಎಚ್ಚರಿಕೆ ನೀಡಲಾಗಿದ್ದು, ಜಾಗೃತಿ ಪೋಸ್ಟರ್‌ಗಳನ್ನು ಹಂಚುವ ಮೂಲಕ ಅರಿವು ಮೂಡಿಸಲಾಯಿತು.

ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಮಕ್ಕಳ ಸಹಾಯವಾಣಿ (ಚೈಲ್ಡ್‌ಲೈನ್) ಸಹಯೋಗದಲ್ಲಿ ಈ ಜಂಟಿ ಕಾರ್ಯಾಚರಣೆ ನಡೆಸಲಾಯಿತು.

ಕಾರ್ಯಾಚರಣೆಯಲ್ಲಿ ಗ್ರೇಡ್-2 ತಹಶೀಲ್ದಾರ್ ಸುಧಾ, ಸಂಡೂರಿನ ಕಾರ್ಮಿಕ ನಿರೀಕ್ಷಕ ಮಂಜುನಾಥ ತೊಂಡೆಹಾಳ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ. ಮೌನೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಎಚ್.ಎನ್. ಸುರೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಸುನೀತಾ, ಮಕ್ಕಳ ರಕ್ಷಣಾ ಘಟಕದ ಅರುಳ್, ಮಕ್ಕಳ ಸಹಾಯವಾಣಿ ಸಿಬ್ಬಂದಿ ಚಂದ್ರಕಲಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

29ರಂದು ಬಂಜಾರಾ ಸಮಾಜದ ಜನಜಾಗೃತಿ ಸಮಾವೇಶ

ಬೀದರ್,ಜೂ.27-

ಒಳ ಮೀಸಲಾತಿಯ ಅವೈಜ್ಞಾನಿಕ ಹಂಚಿಕೆಯ ಮೂಲಕ ಬಂಜಾರಾ ಸಮಾಜಕ್ಕೆ ಅನ್ಯಾಯ ಎಸಗಿರುವ ರಾಜ್ಯ ಸರ್ಕಾರದ ವಿರುದ್ಧ ಜೂ. 29ರ ಬೆಳಗ್ಗೆ 11:30 ಗಂಟೆಗೆ ನಗರದ ಝೀರಾ ಫಂಕ್ಷನ್ ಹಾಲ್ ನಲ್ಲಿ ಬಂಜಾರಾ ಸಮಾಜದಿಂದ ಬೃಹತ್ ಜನಜಾಗೃತಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಪ್ರಭು ಚವ್ಹಾಣ್ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಜೂ.29 ರಂದು ಬೆಳಗ್ಗೆ ಜಿಲ್ಲಾ ಬಂಜಾರಾ ಭವನದ ಹತ್ತಿರದ ಮಾತಾ ಜಗದಂಬಾ ಹಾಗೂ ಸಂತ ಸೇವಾಲಾಲ್ ಮಹಾರಾಜರ ಮಂದಿರದಿಂದ ಝೀರಾ ಪಂಕ್ಷನ್ ಹಾಲ್ ವರೆಗೆ ಪಾದಯಾತ್ರೆ, ಮೂಲಕ ಪ್ರತಿಭಟನಾ ಮೆರವಣಿಗೆ ನಡೆಸಿ ನಂತರ ಜನಜಾಗೃತಿ ಸಮಾವೇಶ ಆರಂಭಿಸಲಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಮಾಜಿ ಶಾಸಕ ಪಿ.ರಾಜೀವ್, ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಹೂವಿನ ಹಡಗಲಿ ಶಾಸಕ ಕೃಷ್ಣಾ ನಾಯಕ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಹುಮನಾಬಾದ್ ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ್, ಚಿಂಚೋಳಿ ಶಾಸಕ ಅವಿನಾಶ್ ಜಾಧವ್, ಮಾಜಿ ಸಂಸದ ಉಮೇಶ್ ಜಾಧವ್, ವಿಧಾನ ಪರಿಷತ್ತಿನ ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪೂರೆ, ಸುಭಾಷ್ ಕಲ್ಲೂರ, ಮಾಜಿ ಶಾಸಕ ಪ್ರಕಾಶ್ ಖಂಡ್ರೆ, ಈಶ್ವರಸಿಂಗ್ ಠಾಕೂರ, ಬಂಜಾರಾ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ್ ಪವಾರ್ ಸೇರಿದಂತೆ ಪಕ್ಷದ ಮುಖಂಡರು, ಸಮಾಜದ ಗಣ್ಯರು ಈ ಸಮಾವೇಶದಲ್ಲಿ ಭಾಗವಹಿಸುವರು. ಆದ್ದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಸಂಡೂರು: ಮುಂಗಾರು ಹಂಗಾಮಿನ ಬೆಳೆ ವಿಮೆ ನೋಂದಣಿ ಆರಂಭ

ಬಳ್ಳಾರಿ,ಜೂ.27-

ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ'ಯಡಿ ಕೃಷಿ ಬೆಳೆಗಳ ವಿಮೆ ನೋಂದಣಿ ಪ್ರಕ್ರಿಯೆ ಆರಂಭವಾಗಿದೆ.

ಸಡೂರು ತಾಲೂಕಿನ ರೈತರು ನೈಸರ್ಗಿಕ ವಿಕೋಪಗಳಿಂದ ಎದುರಾಗಬಹುದಾದ ನಷ್ಟವನ್ನು ತಪ್ಪಿಸಲು ನಿಗದಿತ ಅವಧಿಯೊಳಗೆ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಸಂಡೂರು ತಾಲೂಕಿನ ಸಹಾಯಕ ಕೃಷಿ ನಿರ್ದೇಶಕ ಮೊಹಮ್ಮದ್ ರಫಿಯುಲ್ಲರಝ್ವಿ ಅವರು ಕೋರಿದ್ದಾರೆ.

ಆಲಿಕಲ್ಲು ಮಳೆ, ಭೂ ಕುಸಿತ ಮತ್ತು ಬೆಳೆ ಮುಳುಗಡೆಯಂತಹ ನೈಸರ್ಗಿಕ ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿಯಾದ ಸಂದರ್ಭದಲ್ಲಿ ಈ ವಿಮಾ ಯೋಜನೆ ರೈತರಿಗೆ ಆಸರೆಯಾಗಲಿದೆ. ಒಂದು ವೇಳೆ ಇಂತಹ ಘಟನೆಗಳು ಸಂಭವಿಸಿದರೆ, 72 ಗಂಟೆಗಳೊಳಗಾಗಿ ಕೃಷಿ ಇಲಾಖೆಗೆ ಅಥವಾ ವಿಮಾ ಕಂಪನಿಗೆ ಕಡ್ಡಾಯವಾಗಿ ಮಾಹಿತಿ ನೀಡಬೇಕು. ಇದು ಪರಿಹಾರ ಪಡೆಯಲು ಅತ್ಯಗತ್ಯವಾದ ಹಂತವಾಗಿದೆ ಎಂದು ಅವರು ತಿಳಿಸಿದ್ದಾರೆ.

ವಿವಿಧ ಬೆಳೆಗಳು ಮತ್ತು ನೋಂದಣಿಗೆ ಕೊನೆಯ ದಿನಾಂಕಗಳ ವಿವರ: ಜುಲೈ 15 ರೊಳಗೆ ನೋಂದಾ ಯಿಸಬೇಕಾದ ಬೆಳೆಗಳು (ಪ್ರತಿ ಎಕರೆಗೆ ವಿಮಾ ಕಂತು): ಎಳ್ಳು (ಮಳೆಯಾಶ್ರಿತ)- ರೂ.268.

ಜು.31 ರೊಳಗೆ ನೋಂದಾಯಿಸಬೇಕಾದ ಬೆಳೆಗಳು (ಪ್ರತಿ ಎಕರೆಗೆ ವಿಮಾ ಕಂತು): ಮಳೆಯಾಶ್ರಿತ ಸೂರ್ಯಕಾಂತಿ ರೂ.390, ನೀರಾವರಿ ಸೂರ್ಯ ಕಾಂತಿ ರೂ. 469, ಮಳೆಯಾಶ್ರಿತ ಜೋಳ ರೂ. 359, ನೀರಾವರಿ ಜೋಳ ರೂ.426. ನೋಂದಣಿ ಎಲ್ಲಿ ಮಾಡಿಸಬೇಕು?: ಬೆಳೆ ವಿಮೆ ನೋಂದಣಿಗಾಗಿ ರೈತರು ತಮ್ಮ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಿಗೆ ಅಥವಾ ತಾವು ವ್ಯವಹಾರ ನಡೆಸುವ ಬ್ಯಾಂಕುಗಳಿಗೆ ಸಂಪರ್ಕಿಸಬಹುದು.

ಯೋಜನೆಯ ಕುರಿತು ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ ಅಥವಾ ಸಂಡೂರು ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಇಲ್ಲಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಆಶಾ ಕಾರ್ಯಕರ್ತೆಯರ ಮುಷ್ಕರ ಮುಂದುವರಿಕೆ

ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಾತ್ರ ಭಾಗವಹಿಸಲು ತೀರ್ಮಾನ

ಈ ಹಿಂದೆ ಕೆಲಸದಿಂದ ತೆಗೆದುಹಾಕಲಾಗಿದ್ದ ಐವರು ಆಶಾ ಕಾರ್ಯಕರ್ತೆಯರ ಮರು ನೇಮಕಾತಿ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ಆರೋಗ್ಯ ಇಲಾಖೆ ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ.

ಜುಲೈ 2 ಹಾಗೂ 3ರಂದು ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಿ ಬಾಕಿ ವೇತನದ ಸ್ಥಳೀಯ ಸಮಸ್ಯೆಗಳನ್ನು ಇತ್ಯರ್ಥಪಡಿಸುವುದಾಗಿ ಜಿಲ್ಲಾ ಆರ್‌ಸಿಎಚ್‌ಒ ಅಧಿಕಾರಿಗಳು ತಿಳಿಸಿದ್ದಾರೆ.

ಸಭೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಆಶಾ ಕಾರ್ಯಕರ್ತೆಯರ ಸಹಕಾರ ಕೋರಲಾಗಿದ್ದು, ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಕಾರ್ಯಕ್ರಮದಲ್ಲಿ ಮಾತ್ರ ಸಕ್ರಿಯವಾಗಿ ಭಾಗವಹಿಸಲು ಸಂಘ ತೀರ್ಮಾನಿಸಿದೆ.

ಆದರೆ ಪಲ್ಸ್ ಪೋಲಿಯೋ ಅಭಿಯಾನ ಹೊರತುಪಡಿಸಿ ಇಲಾಖೆಯ ಉಳಿದ ಯಾವುದೇ ಆನ್‌ಲೈನ್ ಹಾಗೂ ಆಫ್‌ಲೈನ್ ಕಾರ್ಯಗಳನ್ನು ಕೈಗೊಳ್ಳುವುದಿಲ್ಲ. ಐದು ತಿಂಗಳ ಬಾಕಿ ವೇತನ ಮತ್ತು ಗೌರವಧನ ಸಂಪೂರ್ಣವಾಗಿ ಬ್ಯಾಂಕ್ ಖಾತೆಗೆ ಜಮೆಯಾಗುವವರೆಗೆ ಅನಿರ್ದಿಷ್ಟಾವಧಿ ಮುಷ್ಕರ ಮುಂದುವರಿಯಲಿದೆ ಎಂದು ಸಂಘದ ಜಿಲ್ಲಾ ಮುಖಂಡ ಮಹೇಶ್ ಸಿ. ತಿಳಿಸಿದ್ದಾರೆ.

''ಬಾಕಿ ಹಣ ಪಾವತಿಯಾಗದಿದ್ದರೆ ಪಲ್ಸ್ ಪೋಲಿಯೋ ಬಳಿಕ ಹೋರಾಟ ಮತ್ತಷ್ಟು ತೀವ್ರಗೊಳ್ಳಲಿದೆ'' ಎಂದು ಆಶಾ ಕಾರ್ಯಕರ್ತೆಯರು ಎಚ್ಚರಿಕೆ ನೀಡಿದ್ದಾರೆ.

ರಾಯಚೂರಿನ ವಿವಿಧೆಡೆ ಮೊಹರಂ ಆಚರಣೆ

ಮೊಹರಂ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಹಲವರು ಅನ್ನಸಂತರ್ಪಣೆ, ರಕ್ತದಾನ ಸೇರಿದಂತೆ ವಿವಿಧ ಸಾಮಾಜಿಕ ಸೇವಾ ಕಾರ್ಯಗಳನ್ನು ಕೈಗೊಂಡರು.

ಮೊಹರಂ ಅಂಗವಾಗಿ ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಪಂಜೆಗಳ ಭವ್ಯ ಮೆರವಣಿಗೆ ನಡೆಯಿತು. ಸಾರ್ವಜನಿಕರಿಗೆ ಸಿಹಿ ಪಾನಕ ಹಾಗೂ ಊಟ ವಿತರಿಸಲಾಯಿತು. ಗ್ರಾಮೀಣ ಪ್ರದೇಶಗಳಲ್ಲಿ ಸಂಜೆ ವೇಳೆ ಮೆರವಣಿಗೆ ನಡೆದರೆ, ನಗರದಲ್ಲಿ ರಾತ್ರಿ ಆರಂಭವಾದ ಮೆರವಣಿಗೆ ಖಾಸಬಾವಿ ಪ್ರದೇಶದಲ್ಲಿ ಸಂಪನ್ನವಾಯಿತು.

ಹಬ್ಬವು ಶಾಂತಿಯುತವಾಗಿ ನಡೆಯಲು ಪೊಲೀಸ್ ಇಲಾಖೆ ಪ್ರಮುಖ ರಸ್ತೆಗಳಲ್ಲಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ ಬಿಗಿ ಭದ್ರತೆ ಒದಗಿಸಿತ್ತು. ಆಶುರಖಾನಾಗಳ ಸುತ್ತಮುತ್ತ ಪೊಲೀಸ್ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಮೊಹರಂ ಹಿನ್ನೆಲೆಯಲ್ಲಿ ಆಶುರಖಾನಾಗಳನ್ನು ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಗ್ರಾಮೀಣ ಭಾಗಗಳಲ್ಲಿ ವಿವಿಧ ಬಣ್ಣದ ವಸ್ತ್ರ, ಅಲಂಕಾರಿಕ ರಿಬ್ಬನ್‌ಗಳು ಹಾಗೂ ಬಿದಿರಿನ ಕೋಲುಗಳೊಂದಿಗೆ ಭಕ್ತರು ಅಲಾಯಿ ಹಾಡುಗಳಿಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

ಪೀರಾ ದೇವರುಗಳ ಮೆರವಣಿಗೆ, ಹೆಜ್ಜೆ ಕುಣಿತ, ಗೆಜ್ಜೆ ಕುಣಿತ, ಹಲಗೆ ವಾದನ, ಹುಲಿ ಕುಣಿತ ಹಾಗೂ ಸಾಂಪ್ರದಾಯಿಕ ರಿವಾಯತ್ ಪದಗಳು ಹಬ್ಬದ ಮೆರುಗು ಹೆಚ್ಚಿಸಿದವು. ಹಿಂದೂ-ಮುಸ್ಲಿಂ ಸಮುದಾಯದವರು ಜತೆಗೂಡಿ ಆಚರಿಸಿದ ಮೊಹರಂ ಹಬ್ಬವು ಸೌಹಾರ್ದತೆಯ ಪ್ರತೀಕವಾಗಿ ಮೂಡಿಬಂತು.

ಮಹಿಳೆಯ ಚೀಲದಲ್ಲಿದ್ದ 1.50 ಲಕ್ಷ ರೂ. ಎಗರಿಸಿದ ಇನ್ನೋರ್ವ ಮಹಿಳೆ

ಪಟ್ಟಣದಲ್ಲಿ ಇತ್ತೀಚೆಗೆ ಕಳ್ಳತನ ಪ್ರಕರಣಗಳು ಹೆಚ್ಚಾಗಿವೆ, ಕೆಲ ದಿನಗಳ ಹಿಂದೆ ತಾಲೂಕು ಪಂಚಾಯತ್ ವ್ಯವಸ್ಥಾಪಕರ ಮನೆಯಲ್ಲಿ ಸುಮಾರು ಮೂರು ತೊಲೆ ಬಂಗಾರ ಕಳ್ಳತನವಾಗಿತ್ತು. ಬಸ್ ನಿಲ್ದಾಣ, ಸಂತೆ ಮಾರುಕಟ್ಟೆಯಲ್ಲಿ ಮೊಬೈಲ್, ನಗದು ಸೇರಿದಂತೆ ಇನ್ನಿತರ ವಸ್ತುಗಳ ಕಳ್ಳತನ ನಿರಂತರವಾಗಿ ನಡೆಯುತ್ತಿದೆ. ಈ ಬಗ್ಗೆ ಪೊಲೀಸರು ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಜಗತ್ತಿನ ಪ್ರಿಯನಗರ-ಕರುನಾಡ ಹೃದಯನಗರ ಬೆಗಳೂರಿನ ನಿರ್ಮಾತೃ ಕೆಂಪೇಗೌಡ ಪ್ರಸ್ತುತ ಆಡಳಿತಗಾರ : ಡಾ.ಕರಿಗೂಳಿ

ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಥಮ ದರ್ಜೆ ಸಹಾಯಕರಾದ ಜಬೀನಾಬೇಗಂ ವಂದನಾರ್ಪಣೆ ಮಾಡಿದರು,ಸಹಾಯಕ ಸಿಬ್ಬಂದಿಯಾದ ಶಾಂತಿ, ಚಿನ್ನ ವರಪ್ರಸಾದ್, ಶರಣಬಸವ ಹಾಗೂ ವಿದ್ಯಾರ್ಥಿಗಳು ಮತ್ತು ಪೋಷಕರು ಹಾಜರಿದ್ದರು.

ರಾಯಚೂರು ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಒದಗಿಸಿ : ಮುಜಾಹಿದ್ ಮರ್ಚೆಡ್ ಆಗ್ರಹ

ಸಮರ್ಪಕವಾಗಿ ನಿರ್ವಹಿಸಿದ್ದರೆ, ಇಂದು ರೈತರು ಇಂತಹ ಸಂಕಷ್ಟಕ್ಕೆ ಸಿಲುಕುತ್ತಿರಲಿಲ್ಲ. ಆದ್ದರಿಂದ ಸದರಿ ಅಧಿಕಾರಿಯ ವಿರುದ್ಧ ಸರ್ಕಾರ ತಕ್ಷಣವೇ ಕ್ರಮ ಕೈಗೊಂಡು, ಅವರನ್ನು ಹುದ್ದೆಯಿಂದ ವಜಾಗೊಳಿಸಿ ಇಲಾಖೆಯ ವೈಫಲ್ಯದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಅಲ್ಲದೆ, ರಾಜ್ಯ ಸರ್ಕಾರವು ತಕ್ಷಣವೇ ರಾಯಚೂರು ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ಹಾನಿಯ ಸಮಗ್ರ ಸಮೀಕ್ಷೆ ನಡೆಸಿ ರೈತರಿಗೆ ಸೂಕ್ತ ಪರಿಹಾರ, ಇನ್‌ಪುಟ್ ಸಬ್ಸಿಡಿ, ಬೆಳೆ ಪರಿಹಾರ ಧನ, ಸಾಲ ಮರುಪಾವತಿಗೆ ಅವಧಿ ವಿಸ್ತರಣೆ, ಬಡ್ಡಿ ಮನ್ನಾ ಹಾಗೂ ಅಗತ್ಯವಿದ್ದಲ್ಲಿ ಉಚಿತ ಮರುಬಿತ್ತನೆ ಬೀಜ ಮತ್ತು ಗೊಬ್ಬರವನ್ನು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ರೈತರ ಜೀವ ಮತ್ತು ಜೀವನೋಪಾಯವನ್ನು ರಕ್ಷಿಸುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ಸರ್ಕಾರ ಮತ್ತು ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳದಿದ್ದರೆ, ರೈತರ ಪರವಾಗಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಮುಜಾಹಿದ್ ಮರ್ಚೆಡ್ ಎಚ್ಚರಿಕೆ ನೀಡಿದ್ದಾರೆ.

ಕೊಪ್ಪಳ: ರಾಷ್ಟ್ರೀಯ ಹೆದ್ದಾರಿ 63ರಲ್ಲಿ ಭೀಕರ ರಸ್ತೆ ಅಪಘಾತ, ಐವರ ಸಾವು

ಕುಟುಂಬದವರಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ. ಗಾಯಗೊಂಡಿರುವ ಎಲ್ಲರೂ ಶೀಘ್ರ ಗುಣಮುಖರಾಗಲಿ ಎಂದು ಹಾರೈಸುತ್ತೇನೆ. ರಾಜ್ಯ ಸರ್ಕಾರವು ಮೃತರ ಕುಟುಂಬಗಳಿಗೆ ಸೂಕ್ತ ಪರಿಹಾರವನ್ನು ತಕ್ಷಣವೇ ಘೋಷಿಸಬೇಕು. ಜೊತೆಗೆ ಗಾಯಾಳುಗಳಿಗೆ ಅತ್ಯುತ್ತಮ ವೈದ್ಯಕೀಯ ಚಿಕಿತ್ಸೆ ಹಾಗೂ ಅಗತ್ಯವಿರುವ ಎಲ್ಲಾ ನೆರವನ್ನು ನೀಡಬೇಕು ಎಂದು ಆಗ್ರಹಿಸುತ್ತೇನೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಎಕ್ಸ್ ಪೋಸ್ಟ್ ಮಾಡಿದ್ದಾರೆ.

ಧಾರವಾಡದಲ್ಲಿ ಇಬ್ಬರ ಸಾವು (ಪ್ರತ್ಯೇಕ ಘಟನೆ): ನಿಂತಿದ್ದ ಲಾರಿಗೆ ಹಿಂಬದಿಯಿಂದ ಕ್ಯಾಂಟರ್ ಡಿಕ್ಕಿ ಹೊಡೆದ ಪರಿಣಾಮವಾಗಿ ಸ್ಥಳದಲ್ಲಿ ಇಬ್ಬರು ಮೃತಪಟ್ಟ ಘಟನೆ ಧಾರವಾಡ ತಾಲೂಕಿನ ಬೇಲೂರ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಶುಕ್ರವಾರ ನಡೆದಿದೆ.

ಧಾರವಾಡ ತಾಲೂಕಿನ ಷಣ್ಮುಖ ಜೋಗಿ (28) ಹಾಗೂ ಉತ್ತರ ಪ್ರದೇಶ ಮೂಲದ ಸಾಗರ್ (30) ಮೃತಪಟ್ಟ ದುರ್ದೈವಿಗಳು. ಟೈರ್ ಬ್ಲಾಸ್ಟ್ ಆಗಿದ್ದ ಹಿನ್ನೆಲೆಯಲ್ಲಿ ರಸ್ತೆ ಮಧ್ಯೆ ಲಾರಿ ನಿಲ್ಲಿಸಿ ಚಾಲಕ ಟೈರ್ ಬದಲಿಸುತ್ತಿದ್ದ. ಲಾರಿ ಧಾರವಾಡದಿಂದ ಬೆಳಗಾವಿಗೆ ಹೋಗುತ್ತಿತ್ತು. ಅದೇ ದಾರಿಯಲ್ಲಿ ಸಾಗುತ್ತಿದ್ದ ಕ್ಯಾಂಟರ್ ಹಿಂದಿನಿಂದ ಲಾರಿಗೆ ಡಿಕ್ಕಿ ಹೊಡೆದಿದೆ. ಸ್ಥಳಕ್ಕೆ ಗರಗ್ ಠಾಣೆ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಡಾ.ಚಂದ್ರಕಲಾ ಬಿದರಿ, ಎಂ.ಎನ್.ಸುಗಂಧಿಗೆ ಕಸಾಪದಿಂದ ಶ್ರದ್ಧಾಂಜಲಿ



ಕಲಬುರಗಿ,ಜೂ.27-

ಕನ್ನಡ ಸಾಹಿತ್ಯ ಲೋಕಕ್ಕೆ ಅಪೂರ್ವ ಕೊಡುಗೆ ನೀಡಿದ ಹಿರಿಯ ಲೇಖಕಿ ಡಾ. ಚಂದ್ರಕಲಾ ಬಿದರಿ ಅವರು ಉತ್ತಮ ವಾಗ್ಮಿ, ವೈಚಾರಿಕ ಚಿಂತಕಿ ಹಾಗೂ ಸಾಹಿತ್ಯದ ಆರಾಧಕರಾಗಿದ್ದರು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯೆಯಾಗಿದ್ದ ದಿವಂಗತ ಡಾ. ಚಂದ್ರಕಲಾ ಬಿದರಿ ಹಾಗೂ ಹಿರಿಯ ಜನಪದ ಕವಿ ಎಂ.ಎನ್. ಸುಗಂಧಿ ಅವರ ಸ್ಮರಣಾರ್ಥ ಆಯೋಜಿಸಿದ್ದ ಶ್ರದ್ಧಾಂಜಲಿ ಸಮಾರಂಭದಲ್ಲಿ ಮಾತನಾಡಿದ ಅವರು, ಡಾ. ಚಂದ್ರಕಲಾ ಬಿದರಿ ಅವರು ತಮ್ಮ ಬದುಕಿನುದ್ದಕ್ಕೂ ಸಾಹಿತ್ಯವನ್ನು ರಕ್ಷಿಸಿ, ಪೋಷಿಸಿ, ಪರಿಪಾಲಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಗಡಿನಾಡು ಭಾಗದಲ್ಲಿ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರಕ್ಕೆ ಗಮನಾರ್ಹ ಸೇವೆ ಸಲ್ಲಿಸಿದ ಅವರು, ಮಹಾತ್ಮರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕಿದ್ದರು ಎಂದು ಹೇಳಿದರು.

ಹಿರಿಯ ಜನಪದ ಕವಿ ದಿವಂಗತ ಎಂ.ಎನ್. ಸುಗಂಧಿ ಅವರು ಜನಪದ ಕಲೆಯನ್ನು ತಮ್ಮ ಉಸಿರಾಗಿಸಿಕೊಂಡಿದ್ದ ಅಪರೂಪದ ಕಲಾವಿದರಾಗಿದ್ದರು. ಜನಪದ ಕಲೆಯ ಜೀವಂತಿಕೆ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದ ಅವರು, ತಮ್ಮ ಸುಶ್ರಾವ್ಯ ಕಂಠದ ಮೂಲಕ ಜನಪದ ಹಾಡುಗಳ ಸೊಗಡನ್ನು ಜನಮನಗಳಿಗೆ ತಲುಪಿಸಿದ್ದರು ಎಂದು ತಿಳಿಸಿದರು.

ಶಿಕ್ಷಕ ವೃತ್ತಿಯೊಂದಿಗೆ ಸಾಹಿತ್ಯ ಮತ್ತು ಜನಪದ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ಎಂ.ಎನ್. ಸುಗಂಧಿ ಅವರ ಸೇವೆ ಸದಾ ಸ್ಮರಣೀಯವಾಗಿರುತ್ತದೆ ಎಂದು ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಹೇಳಿದರು.

ಸಂಶೋಧಕ ಸಾಹಿತಿ ಮುಡುಬಿ ಗುಂಡೇರಾವ, ಹಿರಿಯ ಸಾಹಿತಿ ನರಸಿಂಗರಾವ ಹೇಮನೂರ, ಕೇಂದ್ರ ಕಸಾಪ ಪ್ರತಿನಿಧಿ ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ಜಿಲ್ಲಾ ಕಸಾಪ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಸೇಡಂ ಕಸಾಪ ಕಾರ್ಯದರ್ಶಿ ಪ್ರಕಾಶ ಗೊಣಗಿ ಮಾತನಾಡಿದರು. ಪ್ರಮುಖರಾದ ಸಿದ್ದಲಿಂಗ ಬಾಳಿ, ರಾಜೇಂದ್ರ ಮಾಡಬೂಳ, ಸೋಮಶೇಖರಯ್ಯ ಹೊಸಮಠ, ಬಸಯ್ಯಾ ಸ್ವಾಮಿ, ಮಲ್ಲಿನಾಥ ಸಂಗಶೆಟ್ಟಿ, ದಿನೇಶ ಮದಕರಿ, ರಮೇಶ ಬಡಿಗೇರ, ಪ್ರೊ. ಬಿ. ಎ. ಪಾಟೀಲ, ಮಲ್ಲಿಕಾರ್ಜುನ ಇಬ್ರಾಹಿಂಪೂರ, ವಿಉನೋದಕುಮಾರ ಜೆ.ಎಸ್., ನಾಗರಾಜ ಪಾಟೀಲ, ರೇಣುಕಾ ಎನ್., ಜಯಶ್ರೀ ಜಮಾದಾರ, ಭುವನೇಶ್ವರಿ ಹಳ್ಳಿಖೇಡ, ಸುಜಾತಾ, ಸಿದ್ದಪ್ಪ ಸಂಕುನ್ ಮೇಳಕುಂದಾ, ಈರಣ್ಣ, ರೇವಣಸಿದ್ದಪ್ಪ ಜೀವಣಗಿ, ಡಾ. ಮಲ್ಲಿನಾಥ ತಳವಾರ ಮನೋಹರ ಮರಗುತ್ತಿ, ಶಿವಾನಂದ ಮಠಪತಿ, ಅಮೃತಪ್ಪ ಅಣೂರ, ಗಣೇಶ ಚಿನ್ನಾಕಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

4 ಕೋಟಿ ರೂ. ವೆಚ್ಚದ ರಸ್ತೆ, ಸೇತುವೆ ಕಾಮಗಾರಿಗೆ ಶಾಸಕ ಬಸವರಾಜ ಮತ್ತಿಮಡು ಚಾಲನೆ



ಕಮಲಾಪೂರ,ಜೂ.27-

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಮೂಲಸೌಕರ್ಯ ವೃದ್ಧಿಯೇ ಮೊದಲ ಆದ್ಯತೆಯಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ, ಸೇತುವೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ಪೂರ್ಣಗೊಳಿಸಲಾಗುತ್ತಿದೆ ಎಂದು ಶಾಸಕ ಬಸವರಾಜ ಮತ್ತಿಮಡು ಹೇಳಿದರು.

2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ತಾಲೂಕಿನ ಕಲಕುಟಗಾ ಕ್ರಾಸ್‌ನಿಂದ ಬಾದ ಹಿಪ್ಪರಗಾ ಗಡಿವರೆಗೆ ರಸ್ತೆ ಹಾಗೂ ಸೇತುವೆ ನಿರ್ಮಾಣ ಮತ್ತು ಕಲಕುಟಗಾ ಕ್ರಾಸ್‌ನಿಂದ ಕಲಕುಟಗಾ ಗ್ರಾಮದವರೆಗೆ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಶಾಸಕರಾಗಿ ಆಯ್ಕೆಯಾದ ಬಳಿಕ ವಿವಿಧ ಯೋಜನೆಗಳಡಿ ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದ್ದು, ಗ್ರಾಮೀಣ ಭಾಗದಲ್ಲಿ ಹಲವು ಕಾಮಗಾರಿಗಳು ಪೂರ್ಣಗೊಂಡಿವೆ. ಉಳಿದ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿವೆ ಎಂದು ತಿಳಿಸಿದರು.

ಕಲಕುಟಗಾ ಗ್ರಾಮದ ಜನರ ಬಹುಕಾಲದ ಬೇಡಿಕೆಯಾಗಿದ್ದ ರಸ್ತೆ ಹಾಗೂ ಸೇತುವೆ ನಿರ್ಮಾಣಕ್ಕಾಗಿ ಸುಮಾರು 4 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಕಾಮಗಾರಿಗೆ ಇದೀಗ ಅಧಿಕೃತ ಚಾಲನೆ ನೀಡಲಾಗಿದೆ. ರಸ್ತೆ ಮತ್ತು ಸೇತುವೆ ನಿರ್ಮಾಣದಿಂದ ಮಳೆಗಾಲದಲ್ಲಿ ಉಂಟಾಗುತ್ತಿದ್ದ ಸಂಚಾರ ಸಮಸ್ಯೆ ಹಾಗೂ ಸಾರ್ವಜನಿಕರ ಸಂಕಷ್ಟಕ್ಕೆ ಶಾಶ್ವತ ಪರಿಹಾರ ದೊರೆಯಲಿದೆ ಎಂದು ಹೇಳಿದರು.

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಮೂಲಸೌಕರ್ಯ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಸರ್ಕಾರದ ವಿವಿಧ ಯೋಜನೆಗಳ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಶಾಸಕ ಬಸವರಾಜ ಮತ್ತಿಮಡು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಮಶೋದ್ದೀನ್ ಪಟೇಲ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ತಾಜ್ಜೋದ್ದೀನ್ ಪಟೇಲ್, ದಸ್ತಗೀರ್ ಮುಜಾವರ, ಮಲ್ಲಿಕಾರ್ಜುನ ಮರತೂರಕರ್, ಗಂಗಪ್ಪಗೌಡ ಪಾಟೀಲ, ಚೆನ್ನು ಮುನ್ನಳಿ, ಉದಯ ಪಾಟೀಲ, ಸತೀಶ ಸೊರಡೆ, ಸತೀಶ ಪೂಜಾರಿ, ಶಿವಾನಂದ ಪಾಟೀಲ, ಚಂದ್ರಕಾಂತ ಬಿರಾದಾರ, ವಿಜಯಕುಮಾರ ಪಾಟೀಲ, ಲಿಂಗಶೆಟ್ಟಿ ಜಮಾದಾರ, ಶರಣಪ್ಪ ಬಿರಾದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಸಂಗೀತ ಮತ್ತು ಸಾಹಿತ್ಯ ಮಾನಸಿಕ ನೆಮ್ಮದಿಗೆ ಪೂರಕ : ನೀಲಕಂಠರಾವ ಮೂಲಗೆ

ಕಲಬುರಗಿ,ಜೂ.27-

ಹಂಸವೇಣಿ ಸಂಗೀತ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ನಗರದ ಕಲಾ ಮಂಡಳಿ ಸಭಾಂಗಣದಲ್ಲಿ ಆಯೋಜಿಸಿದ್ದ ಸಂಗೀತ ಸ್ವರ ಸಂಗಮ ಸಾಂಸ್ಕೃತಿಕ ಕಾರ್ಯಕ್ರಮವು ಸಂಭ್ರಮ ಹಾಗೂ ಸಾಂಸ್ಕೃತಿಕ ವೈಭವದೊಂದಿಗೆ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ದಕ್ಷಿಣ ಮತಕ್ಷೇತ್ರದ ಕಾಂಗ್ರೆಸ್ ಮುಖಂಡ ನೀಲಕಂಠರಾವ ಮೂಲಗೆ, ಸಂಗೀತ ಮತ್ತು ಸಂಸ್ಕೃತಿ ಸಮಾಜವನ್ನು ಒಗ್ಗೂಡಿಸುವ ಶಕ್ತಿಯಾಗಿದ್ದು, ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ಕಲೆಯ ಬಗ್ಗೆ ಆಸಕ್ತಿ ಬೆಳೆಸುವುದರ ಜೊತೆಗೆ ಕನ್ನಡ ಸಂಸ್ಕೃತಿಯ ಉಳಿವು ಮತ್ತು ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಸಾಹಿತಿ ಡಾ. ಕೆ. ಗಿರಿಮಲ್ಲ ಮಾತನಾಡಿ, ಹರಿಯುವ ನೀರು, ಪಕ್ಷಿಗಳು ಹಾಗೂ ನಿಸರ್ಗದ ಪ್ರತಿಯೊಂದು ಅಂಶದಲ್ಲೂ ಸಂಗೀತದ ನಾದ ಅಡಗಿದೆ. ಭಾರತೀಯ ಸಂಸ್ಕೃತಿಯಲ್ಲಿ ಸಂಗೀತಕ್ಕೆ ವಿಶೇಷ ಸ್ಥಾನಮಾನವಿದ್ದು, ಕರ್ನಾಟಕದಲ್ಲಿ ಸಂಗೀತಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ. ರಾಜಮನೆತನಗಳ ಆಸ್ಥಾನಗಳಲ್ಲಿ ಕಲಾವಿದರಿಗೆ ಅಪಾರ ಗೌರವ ದೊರೆಯುತ್ತಿತ್ತು ಎಂದು ತಿಳಿಸಿದರು. ಸಾಹಿತಿ ಡಾ. ವಿಶಾಲಾಕ್ಷಿ ವಿ. ಕರೆಡ್ಡಿ ಮಾತನಾಡಿ, ಸಂಗೀತ ಮತ್ತು ಸಾಹಿತ್ಯವು ಒಂದೇ ನಾಣ್ಯದ ಎರಡು ಮುಖಗಳಂತಿದ್ದು, ಅವು ಮಾನವನ ಮನಸ್ಸಿಗೆ ನೆಮ್ಮದಿ ಮತ್ತು ಸಾಂಸ್ಕೃತಿಕ ಅರಿವು ನೀಡುತ್ತವೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ವಿವಿಧ ಕಲಾವಿದರು ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿ ಪ್ರೇಕ್ಷಕರ ಮನರಂಜಿಸಿದರು. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸಂಸ್ಥೆಯ ಅಧ್ಯಕ್ಷೆ ಪ್ರಿಯಾಂಕಾ ಹೀರೆಮಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಾ. ಬಿ.ಎಚ್.ನಿರಗುಡಿ, ಪ್ರಸಾದ್ ಪಟ್ಟಣರ್, ಡಾ.ಚಂದ್ರಶೇಖರ ದೊಡ್ಡಮನಿ, ಪತ್ರಕರ್ತ ಶರಣಗೌಡ ಪಾಟೀಲ ಪಾಳಾ, ದತ್ತು ಎಚ್.ಭಾಸಗಿ, ಶಾಂತಲಿಂಗಯ್ಯ ಮಠಪತಿ, ಯಂಕಪ್ಪ (ಅಕ್ಷಯ) ಹಾಗೂ ಜ್ಯೋತಿ ಅಕ್ಷಯಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ವಿವಿಧ ಕಲಾವಿದರಿಂದ ಸಂಗೀತ, ನೃತ್ಯ ಹಾಗೂ ಜನಪದ ಕಲಾ ಪ್ರದರ್ಶನಗಳು ಜರುಗಿದ್ದು, ಪ್ರೇಕ್ಷಕರಿಂದ ಉತ್ತಮ ಮೆಚ್ಚುಗೆ ವ್ಯಕ್ತವಾಯಿತು. ಅನೇಕ ಗಣ್ಯರು, ಕಲಾವಿದರು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಗಾಯತ್ರಿ ಎಸ್ ಸ್ವಾಮಿ ನಿರೂಪಿಸಿದರು, ಕೃಷ್ಣಾ ವಂದಿಸಿದರು.



ಕನಕಗಿರಿಯ ವಿವಿಧೆಡೆ ಮೊಹರಂ ಆಚರಣೆ

ಕನಕಗಿರಿ,ಜೂ.27-

ತ್ಯಾಗ ಮತ್ತು ಬಲಿದಾನದ ಪ್ರತೀಕವಾಗಿರುವ ಮೊಹರಂ ಹಬ್ಬವನ್ನು ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಶಾಂತಿಯುತ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು.

ಗುರುವಾರ ರಾತ್ರಿ ನಡೆದ ಖತ್ತಲ್‌ರಾತ್ರಿ ಆಚರಣೆಯಲ್ಲಿ ಭಕ್ತರು ಇಡೀ ರಾತ್ರಿ ಅಲಾಯಿ ಕುಣಿಯ ಮುಂದೆ ಹಲಗೆ ಸೇರಿದಂತೆ ವಿವಿಧ ವಾದ್ಯಗಳನ್ನು ನುಡಿಸಿ ಸಂಭ್ರಮಿಸಿದರು. ಶುಕ್ರವಾರ ಸಂಜೆ ಪೀರರ ದೇವರುಗಳು ಪರಸ್ಪರ ಎದುರಾಗುವ ದೃಶ್ಯವನ್ನು ಕಣ್ತುಂಬಿಕೊಳ್ಳಲು ರಾಜಬೀದಿಯಲ್ಲಿ ಜನಸಾಗರವೇ ಹರಿದುಬಂದಿತ್ತು.

ಬೆಳಗಿನ ಜಾವ ಹೊನ್ನುರುಬಾಷ, ಹಟೇಲಬಾಷ ಹಾಗೂ ಹಸೇನಬಾಷ ದೇವರುಗಳು ಹರಕೆ ಹೊತ್ತ ಮನೆಗಳಿಗೆ ಭೇಟಿ ನೀಡಿದ ವೇಳೆ ಭಕ್ತರು ಮುಜಾವರರ ಪಾದಗಳಿಗೆ ನೀರು ಹಾಕಿ ನಮಸ್ಕರಿಸಿ, ಹೂವಿನ ಹಾರ, ನೋಟಿನ ಹಾರ, ಸಕ್ಕರೆ ಸೇರಿದಂತೆ ವಿವಿಧ ಕಾಣಿಕೆಗಳನ್ನು ಸಮರ್ಪಿಸಿ ಭಕ್ತಿಭಾವ ಮೆರೆದರು.

ಪ್ರತಿ ವರ್ಷದ ಸಂಪ್ರದಾಯದಂತೆ ಹೊನ್ನುರುಬಾಷ ದೇವರು ಉಪ ತಹಶೀಲ್ದಾರ್ ಕಚೇರಿಗೆ ಹಾಗೂ ಹಸೇನಬಾಷ ದೇವರು ಕನಕಾಚಲಪತಿ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಹೆಜ್ಜೆ ಕುಣಿತ, ಅಲಾಯಿ ಕುಣಿತ, ಭಜಂತ್ರಿ, ಯುವಕರ ನೃತ್ಯ, ಬಾಣ ಮತ್ತು ಬಿರುಸು ಪ್ರದರ್ಶನಗಳು ವಿದಾಯ ಮೆರವಣಿಗೆಗೆ ವಿಶೇಷ ಮೆರುಗು ತಂದವು.

ಬೆಂಗಳೂರು, ಹುಬ್ಬಳ್ಳಿ, ಬಳ್ಳಾರಿ, ಸಿಂಧನೂರು, ಕೊಪ್ಪಳ, ಗದಗ, ಗಂಗಾವತಿ, ಬಾಗಲಕೋಟೆ ಹಾಗೂ ಹೊಸಪೇಟೆ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಭಕ್ತರು ಉತ್ಸವದಲ್ಲಿ ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.

ವಿದ್ಯುತ್ ತಂತಿ ತಗುಲಿ ರೈತ ಮೃತ್ಯು : ಲೈನ್‌ಮ್ಯಾನ್ ನಿರ್ಲಕ್ಷ್ಯ ಆರೋಪಿಸಿ ರಸ್ತೆ ತಡೆದು ಗ್ರಾಮಸ್ಥರ ಪ್ರತಿಭಟನೆ

ಅಫಜಲಪುರ:,ಜೂ.27-

ತಾಲೂಕಿನ ಅಳ್ಳಗಿ (ಕೆ) ಗ್ರಾಮದಲ್ಲಿ ವಿದ್ಯುತ್ ತಂತಿ ತಗುಲಿ ರೈತನೊಬ್ಬ ಮೃತಪಟ್ಟಿರುವ ದುರ್ಘಟನೆ ಸಂಭವಿಸಿದ್ದು, ಈ ಪ್ರಕರಣದಲ್ಲಿ ಲೈನ್‌ಮ್ಯಾನ್ ನಿರ್ಲಕ್ಷ್ಯ ಆರೋಪ ಕೇಳಿಬಂದಿದೆ. ಘಟನೆಯ ನಂತರ ಆಕ್ರೋಶಗೊಂಡ ಗ್ರಾಮಸ್ಥರು ಅಫಜಲಪುರ ಪಟ್ಟಣದ ಬಸವೇಶ್ವರ ವೃತ್ತದ ಬಳಿ ಕಲಬುರಗಿ-ವಿಜಯಪುರ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ಘಟನೆ ಅಫಜಲಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ರೈತನನ್ನು ಬಸಪ್ಪ ಮಹದೇವಪ್ಪ ಪೂಜಾರಿ (42) ಎಂದು ಗುರುತಿಸಲಾಗಿದೆ. ಅವರು ಪತ್ನಿ, ಇಬ್ಬರು ಪುತ್ರರು, ಒಬ್ಬ ಪುತ್ರಿ ಹಾಗೂ ಮೂವರು ಸಹೋದರರನ್ನು ಅಗಲಿದ್ದಾರೆ.



ಲಭ್ಯ ಮಾಹಿತಿಯ ಪ್ರಕಾರ, ಶುಕ್ರವಾರ ಬೆಳಿಗ್ಗೆ ಸುಮಾರು 10 ಗಂಟೆ ವೇಳೆಗೆ ಗ್ರಾಮದ ಲೈನ್ ಮ್ಯಾನ್ ಗುಂಡುಜಿ ಚವ್ಹಾಣ ಅವರ ಸೂಚನೆಯ ಮೇರೆಗೆ ಬಸಪ್ಪ ಪೂಜಾರಿ ವಿದ್ಯುತ್ ಕಂಬ ಹತ್ತಿದ್ದರು ಎನ್ನಲಾಗಿದೆ. ಈ ವೇಳೆ ವಿದ್ಯುತ್ ಸರಬರಾಜನ್ನು ಸಂಪೂರ್ಣ ಸ್ಥಗಿತಗೊಳಿಸಲಾಗಿತ್ತೇ ಮತ್ತು ಅಗತ್ಯ ಸುರಕ್ಷತಾ ಕ್ರಮಗಳನ್ನು ಪಾಲಿಸಲಾಗಿತ್ತೇ ಎಂಬ ಪ್ರಶ್ನೆಗಳು ಉದ್ಭವಿಸಿವೆ.

ಕಂಬ ಹತ್ತಿದ ಕೆಲವೇ ಕ್ಷಣಗಳಲ್ಲಿ ವಿದ್ಯುತ್ ತಂತಿ ತಗುಲಿ ಬಸಪ್ಪ ಪೂಜಾರಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಥಳದಲ್ಲಿದ್ದ ಸಾರ್ವಜನಿಕರು ಅವರನ್ನು ತಕ್ಷಣ ಅಫಜಲಪುರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದರೂ, ಚಿಕಿತ್ಸೆ ಫಲಕಾರಿ ಯಾಗದೆ ಅವರು ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯಿಂದ ಗ್ರಾಮದಲ್ಲಿ ಆಕ್ರೋಶದ ವಾತಾವರಣ ನಿರ್ಮಾಣವಾಗಿದ್ದು, ಲೈನ್‌ಮ್ಯಾನ್ ಕರ್ತವ್ಯಲೋಪ ಮತ್ತು ನಿರ್ಲಕ್ಷ್ಯವೇ ರೈತನ ಸಾವಿಗೆ ಕಾರಣ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ರಸ್ತೆ ತಡೆದು ಪ್ರತಿಭಟನೆ ನಡೆಸಿದ ಅವರು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ವಿದ್ಯುತ್ ಇಲಾಖೆಯ ನಿಯಮಾನುಸಾರ ಯಾವುದೇ ವ್ಯಕ್ತಿಯನ್ನು ವಿದ್ಯುತ್ ಕಂಬ ಹತ್ತಿಸುವ ಮುನ್ನ ವಿದ್ಯುತ್ ಸರಬರಾಜನ್ನು ಸಂಪೂರ್ಣ ಸ್ಥಗಿತಗೊಳಿಸಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಆದರೆ ಈ ಪ್ರಕರಣದಲ್ಲಿ ಆ ನಿಯಮಗಳನ್ನು ಪಾಲಿಸಲಾಗಿಲ್ಲ ಎಂಬ ಅನುಮಾನ ವ್ಯಕ್ತವಾಗಿದೆ.

ಘಟನೆ ಕುರಿತು ಪೊಲೀಸರು ಹಾಗೂ ವಿದ್ಯುತ್ ಇಲಾಖೆಯ ಹಿರಿಯ ಅಧಿಕಾರಿಗಳು ತನಿಖೆ ಆರಂಭಿಸಿದ್ದು, ನಿರ್ಲಕ್ಷ್ಯ ಸಾಬೀತಾದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿದುಬಂದಿದೆ. ಅಲ್ಲದೆ, ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡುವುದರ ಜೊತೆಗೆ ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಸರ್ಕಾರವನ್ನು ಆಗ್ರಹಿಸಿದ್ದಾರೆ.

ಅದಕ್ಷತೆ, ಸ್ವಜನಪಕ್ಷಪಾತದಿಂದ ಪರಿಷತ್ ಚುನಾವಣೆಯಲ್ಲಿ ಬಿಜೆಪಿಗೆ ಸೋಲಾಗಿದೆ : ಯತ್ನಾಳ್

ಬೆಂಗಳೂರು,ಜೂ.26-

ಅದಕ್ಷತೆ, ಸ್ವಜಪಕ್ಷಪಾತ, ರಾಜ್ಯ ಬಿಜೆಪಿ ನಾಯಕರಲ್ಲಿ ಸಮನ್ವಯದ ಕೊರತೆ, ಅಡ್ಜಸ್ಟ್‌ಮೆಂಟ್ ರಾಜಕಾರಣ ದಿಂದ ಬಿಜೆಪಿಗೆ ಸೋಲಾಗಿದೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನ ಗೌಡ ಪಾಟೀಲ್ ಯತ್ನಾಳ್ ತಿಳಿಸಿ ದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಹಾಕಿರುವ ಅವರು, ವಿಧಾನ ಪರಿ ಷತ್ ಚುನಾವಣೆಯ ಹೀನಾಯ ಸೋಲಿನಿಂದ ನಗೆಪಾಟಲಾಗಿರುವ ಬಿಜೆಪಿ ರಾಜ್ಯಾಧ್ಯಕ್ಷರ ತಂಡವು ನಾನು ಕಾಂಗ್ರೆಸ್‌ಗೆ ಮತ ಚಲಾಯಿಸಿದ್ದೇನೆ ಎಂಬ ಸುಳ್ಳನ್ನು ಜಾಲತಾಣಗಳಲ್ಲಿ ಹರಿಬಿಡುತ್ತಿದೆ. ಕೈಲಾಗದವರು ಮೈ ಪರಚಿಕೊಂಡರು ಎಂಬಂತೆ ತಮಗೆ ನೀಡಿದ ಜವಾಬ್ದಾರಿಯಲ್ಲಿ ವಿಫಲರಾದ ಅಡ್ಜಸ್ಟ್‌ಮೆಂಟ್ ಗಿರಾಕಿಗಳು ತಮ್ಮ ತಪ್ಪನ್ನು ಮರೆಮಾಚಲು ನನ್ನ ಹೆಸರು ತಳುಕು ಹಾಕುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಕೈಲಾಗದವನಿಗೆ ಕತ್ತೆ ಹೊರುವ ಕೆಲಸ ಎಂಬ ಗಾದೆ ಮಾತಿನಂತೆ ಕೊಟ್ಟ ಕೆಲಸವನ್ನು ಮಾಡದೇ ಬೇರೆ ನಾಯಕರ ಮೇಲೆ ತಪ್ಪು ಹೊರೆಸುವ ಕಾಯಕದಲ್ಲಿ ಅಡ್ಜಸ್ಟ್‌ಮೆಂಟ್ ಗಿರಾಕಿಗಳು ನಿರತರಾಗಿದ್ದಾರೆ ಎಂದು ಟೀಕಿಸಿದ್ದಾರೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ನಾನು ಕಾಂಗ್ರೆಸ್ ಪರ ಮತ ಚಲಾಯಿಸಿರುವುದಿಲ್ಲ. ಭಾರತೀಯ ಜನತಾ ಪಕ್ಷದ ಚಿಹ್ನೆಯಡಿ ಆಯ್ಕೆಯಾಗಿರುವ ನಾನು ಪಕ್ಷದ ಅಭ್ಯರ್ಥಿಗೆ ಮತ ಚಲಾಯಿಸಿರುತ್ತೇನೆ. ಕೆಲಸವಿಲ್ಲದ ಕೆಲವು ತಿಳಿಗೇಡಿಗಳು ಹಾಗೂ ಅವರ ಪಟಾಲಂ ಮಾಡುತ್ತಿರುವ ಆಪಾದನೆಗಳು ಸತ್ಯಕ್ಕೆ ದೂರವಾದವು ಎಂದು ಹೇಳಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಗಾಜಾದ ಕಣ್ಣೀರು; ಇತಿಹಾಸದ ಪುಟದಲ್ಲಿ ಅಪರಾಧಿಯಾಗಿ ದಾಖಲಾಗುವ ಮೋದಿ!

ಇತಿಹಾಸದ ಪುಟಗಳಲ್ಲಿ ಮೌನವೂ ಒಂದು ನಿಲುವಾಗಿ ಪರಿಣಮಿಸುತ್ತದೆ. ಗಾಜಾದಲ್ಲಿ ಅಮಾಯಕರು ಮತ್ತು ಮಕ್ಕಳ ಸಾವುಗಳನ್ನು ಕಣ್ಣಾರೆ ಕಂಡೂ ರಾಜತಾಂತ್ರಿಕತೆ ಹೆಸರಿನಲ್ಲಿ ಮೌನವಾಗಿರುವುದು ಭಾರತದ ನೈತಿಕ ನಾಯಕತ್ವಕ್ಕೆ ಶೋಭೆ ತರುವಂಥದ್ದಲ್ಲ.



ಜಗತ್ತಿನ ಯಾವುದೋ ಒಂದು ಮೂಲೆಯಲ್ಲಿ ಇಡೀ ಮಾನವಕುಲವೇ ತಲೆತಗ್ಗಿಸುವಂತಹ ಕ್ರೌರ್ಯ ನಡೆಯುತ್ತಿರುವಾಗ ಜಾಗತಿಕ ಸಮುದಾಯವು ಮೌನಕ್ಕೆ ಜಾರುವುದು ಅತ್ಯಂತ ಆಘಾತಕಾರಿ. ನಾಚಿಕೆಗೇಡು. ಇಡೀ ಜಗತ್ತು ಅಂತಹದೊಂದು ನಾಚಿಕೆಗೇಡಿನ ಸಾಕ್ಷಿಯಾಗಿ ನಿಂತಿದೆ. ಗಾಜಾದಲ್ಲಿನ ಬಿಕ್ಕಟ್ಟು ಜಗತ್ತಿನ ನೈತಿಕತೆ ಮತ್ತು ಮಾನವೀಯತೆಯ ಮಹಾ ಪತನದ ಸ್ಪಷ್ಟ ಸಂಕೇತವಾಗಿ ಕಾಣುತ್ತಿದೆ. ಅದರಲ್ಲೂ, ಇಸ್ರೇಲ್-ಅಮೆರಿಕ ಎದುರು ಮೋದಿ ಸರ್ಕಾರ ಮಂಡಿಯೂರಿ ಶರಣಾಗಿರುವುದನ್ನು ಬಹಿರಂಗಗೊಳಿಸಿದೆ.

ಗಾಜಾ ಮೇಲೆ ಇಸ್ರೇಲ್ ಕ್ರೂರ ದಾಳಿ ನಡೆಸುತ್ತಿದೆ, ನರಮೇಧ ಎಸಗುತ್ತಿದೆ. ಪ್ರತಿದಿನ ನೂರಾರು ಅಮಾಯಕ ಜೀವಗಳು, ಮಹಿಳೆಯರು ಹಾಗೂ ಕಂದಮ್ಮಗಳು ಯುದ್ಧದ ಭೀಕರತೆಗೆ ಬಲಿಯಾಗುತ್ತಿದ್ದಾರೆ. 2023ರ ಅಕ್ಟೋಬರ್ 7ರಿಂದ 2025ರ ಅಕ್ಟೋಬರ್‌ವರೆಗೆ ಸುಮಾರು 73,000ಕ್ಕೂ ಹೆಚ್ಚು ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯದ ಅಂಕಿಅಂಶಗಳು ಹೇಳಿವೆ. ಈ ಸಾವುಗಳ ಸಂಖ್ಯೆ ಈಗ 1 ಲಕ್ಷವನ್ನೂ ಮೀರಿದೆ ಎಂದು ಮ್ಯಾಕ್ಸ್ ಪ್ಲಾಂಕ್ ಇನ್‌ಸ್ಟಿಟ್ಯೂಟ್‌ನ ಜನಸಂಖ್ಯಾಶಾಸ್ತ್ರ ಸಂಶೋಧನಾ ಕೇಂದ್ರ ಅಂದಾಜು ಮಾಡಿದೆ. ಲಕ್ಷಾಂತರ ಜನರು ಸ್ಥಳಾಂತರಗೊಂಡು ತಮ್ಮ ನೆಲೆಗಳನ್ನು ಕಳೆದುಕೊಂಡಿದ್ದಾರೆ.

ಇಸ್ರೇಲ್ ತನ್ನ ಕ್ರೌರ್ಯವನ್ನು ಕೇವಲ ಮಿಲಿಟರಿ ದಾಳಿಗೆ ಸೀಮಿತ ಮಾಡಿಕೊಂಡಿಲ್ಲ. ಗಾಜಾ ಮೇಲೆ ಇಸ್ರೇಲ್ ವ್ಯವಸ್ಥಿತವಾಗಿ ಹೇರಿರುವ ಕಠಿಣ ದಿಗ್ಬಂಧನಗಳಿಂದಾಗಿ ಇಡೀ ಜನಸಮುದಾಯವೇ ಜೀವಂತ ನರಕವನ್ನು ಅನುಭವಿಸುತ್ತಿದೆ. ಅಲ್ಲಿನ ಪ್ರಮುಖ ಆಸ್ಪತ್ರೆಗಳು, ಶಾಲೆಗಳು ಹಾಗೂ ವಸತಿ ಸಮುಚ್ಚಯಗಳು ಧ್ವಂಸಗೊಂಡಿವೆ. ಕುಡಿಯುವ ನೀರು, ವಿದ್ಯುತ್ ಹಾಗೂ ಕನಿಷ್ಠ ವೈದ್ಯಕೀಯ ಸೌಲಭ್ಯಗಳೂ ಇಲ್ಲದಂತಾಗಿದೆ. ಜೊತೆಗೆ, ಇಸ್ರೇಲ್ ಹಸಿವನ್ನೂ ಅಸ್ತ್ರವನ್ನಾಗಿ ಮಾಡಿಕೊಂಡಿದೆ.

ಗಾಜಾದ ಸಣ್ಣ ಮಕ್ಕಳು ಮತ್ತು ಕಂದಮ್ಮಗಳು ಹಸಿವು, ಅಪೌಷ್ಟಿಕತೆ ಹಾಗೂ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಅಲ್ಲಿನ ಪುಟ್ಟ ಕಂದಮ್ಮಗಳು ಆಹಾರವಿಲ್ಲದೆ, ತೀವ್ರ ಅಪೌಷ್ಟಿಕತೆಯಿಂದಾಗಿ ಹೆತ್ತವರ ಕಣ್ಣೆದುರೇ ಪ್ರಾಣ ಬಿಡುತ್ತಿದ್ದಾರೆ. ಆದರೆ, ಹಸಿವಿನಿಂದ ನರಳಿ ಸಾಯುತ್ತಿರುವ ಮಕ್ಕಳ ಆಕ್ರಂದನವು ಜಾಗತಿಕ ನಾಯಕರ ಕಿವಿಗಳಿಗೆ ಕೇಳಿಸುತ್ತಿಲ್ಲ. ಬದುಕುಳಿದಿರುವ ಜನರೂ ನಾಳೆ ತಮಗೆ ಕನಿಷ್ಠ ಆಹಾರ ಸಿಗುತ್ತದೆಯೇ ಅಥವಾ ಮತ್ತೊಂದು ಬಾಂಬ್ ಬಿದ್ದು ಪ್ರಾಣ ಹೋಗುತ್ತದೆಯೇ ಎಂಬ ಭೀತಿಯಲ್ಲೇ ದಿನ ಕಳೆಯುವಂತಾಗಿದೆ.

ಇಸ್ರೇಲ್‌ನ ಭೀಕರ ದಾಳಿ ಮತ್ತು ಹಸಿವಿನಿಂದಾಗಿ ಕಳೆದ ಎರಡು ವರ್ಷಗಳಲ್ಲಿ ಗಾಜಾದ 20,179 ಮಕ್ಕಳು ಸಾವನ್ನಪ್ಪಿದ್ದಾರೆ. ಪುಟ್ಟ ಮಕ್ಕಳನ್ನು ಕೊಲ್ಲುತ್ತಿರುವ ಇಸ್ರೇಲ್, ಗಾಜಾ ಜನರ ಭವಿಷ್ಯವನ್ನೇ ನಾಶಗೊಳಿಸಲು ಹೂಡಿರುವ ಸಂಚು. ಪ್ಯಾಲೆಸ್ತೀನ್ ಸಮುದಾಯವನ್ನು ಬುಡಸಮೇತ ಕಿತ್ತುಹಾಕಿ, ಇಡೀ ಪ್ರದೇಶದಲ್ಲಿ ಪ್ಯಾಲೆಸ್ತೀನಿಯರ ಕುರುಹುಗಳೂ ಇಲ್ಲದಂತೆ ಮಾಡಿ, ಗಾಜಾ ಪಟ್ಟಿಯನ್ನು ತನ್ನ ಕಪಿಮುಷ್ಟಿಗೆ ತೆಗೆದುಕೊಳ್ಳಲು ಹೆಣೆದಿರುವ ನರಭಕ್ಷಕ ಯೋಜನೆ ಎಂದು ಹೇಳಲಾಗಿದೆ.

ಗಾಜಾ ಮೇಲೆ ಇಸ್ರೇಲ್ ಈ ಪ್ರಮಾಣದ ಕ್ರೌರ್ಯ ಎಸಗುತ್ತಿರುವ ಸಮಯದಲ್ಲಿ ಇರಾನ್, ದಕ್ಷಿಣ ಆಫ್ರಿಕಾ, ಯುರೋಪಿಯನ್ ರಾಷ್ಟ್ರಗಳು, ಐರ್ಲೆಂಡ್, ಸ್ಪೇನ್, ನಾರ್ವೆ, ಸ್ಲೊವೇನಿಯಾ, ಕೊಲಂಬಿಯಾ, ಬೊಲಿವಿಯಾ, ಬ್ರೆಜಿಲ್, ಚಿಲಿ, ಟರ್ಕಿ, ಈಜಿಪ್ಟ್, ಚೀನಾ ಹಾಗೂ ರಷ್ಯಾದಂತಹ ರಾಷ್ಟ್ರಗಳು ಗಾಜಾ ಪರವಾಗಿ ದನಿ ಎತ್ತಿವೆ. ಇಸ್ರೇಲ್‌ನ ಕ್ರೌರ್ಯವನ್ನು ಖಂಡಿಸಿವೆ. ದಾಳಿಯನ್ನು ನಿಲ್ಲಿಸುವಂತೆ ಒತ್ತಾಯಿಸಿವೆ. ಆದರೆ, ವಿಶ್ವಗುರು ಮೋದಿ ಸರ್ಕಾರ ಮಾತ್ರ ಮೌನಕ್ಕೆ ಶರಣಾಗಿದೆ. ಇಸ್ರೇಲ್ ಪರ ಧೋರಣೆ ತಳೆದಿದೆ. ಅಮೆರಿಕಗೆ ಹೆದರಿ, ಇಸ್ರೇಲ್ ಎದುರು ಮಂಡಿಯೂರಿದೆ.

ಐತಿಹಾಸಿಕವಾಗಿ ಭಾರತವು ಯಾವಾಗಲೂ ತುಳಿತಕ್ಕೊಳಗಾದವರ, ಸ್ವಾತಂತ್ರ್ಯಕ್ಕಾಗಿ ಹೋರಾಡುವವರ ಹಾಗೂ ಜಾಗತಿಕ ಶಾಂತಿಯ ಪರವಾಗಿ ಅತ್ಯಂತ ಗಟ್ಟಿ ಧ್ವನಿಯನ್ನು ಎತ್ತಿದೆ. ಅಂತೆಯೇ, ಪ್ಯಾಲೆಸ್ತೀನ್‌ನ ಸ್ವಾತಂತ್ರ್ಯ ಮತ್ತು ಹಕ್ಕುಗಳಿಗೆ ನಿರಂತರ ಬೆಂಬಲ ನೀಡಿದೆ. ಮಹಾತ್ಮ ಗಾಂಧಿ ಮತ್ತು ಜವಾಹರಲಾಲ್ ನೆಹರು ಅವರ ಕಾಲದಿಂದ ಹಿಡಿದು ಮನಮೋಹನ್ ಸಿಂಗ್ ಕಾಲದವರೆಗೆ ಭಾರತವು ಪ್ಯಾಲೆಸ್ತೀನ್‌ಗೆ ಮುಕ್ತದ ಪರ ನಿಲುವು ತಳೆದು, ನೈತಿಕ ಬೆಂಬಲ ನೀಡಿತ್ತು. ಮಾತ್ರವಲ್ಲ, 1988ರಲ್ಲಿಯೇ ಪ್ಯಾಲೆಸ್ತೀನ್‌ಅನ್ನು ಮಧ್ಯಪ್ರಾಚ್ಯದ ಅನೇಕ ದೇಶಗಳಿಗಿಂತ ಮೊದಲೇ ಒಂದು ಸ್ವತಂತ್ರ ರಾಷ್ಟ್ರವೆಂದು ಭಾರತ ಗುರುತಿಸಿತ್ತು.

ಆದರೆ, ಪ್ರಸ್ತುತ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಧೋರಣೆಯು ಈ ಸಾಂಪ್ರದಾಯಿಕ ನೈತಿಕ ನಿಲುವಿನಿಂದ ಸಂಪೂರ್ಣವಾಗಿ ದೂರ ಸರಿದಿದೆ. ಗಾಜಾದಲ್ಲಿ ನಡೆಯುತ್ತಿರುವ ಇಸ್ರೇಲ್‌ನ ಭೀಕರ ಕ್ರೌರ್ಯವನ್ನು ಮತ್ತು ಅಮಾನವೀಯ ಕೃತ್ಯವನ್ನು ಕಟುವಾದ ಶಬ್ದಗಳಲ್ಲಿ ಖಂಡಿಸುವಲ್ಲಿ ಮೋದಿ ಸರ್ಕಾರವು ಸುದೀರ್ಘ ಮೌನಕ್ಕೆ ಶರಣಾಗಿದೆ.

ಹಮಾಸ್-ಇಸ್ರೇಲ್ ನಡುವೆ ಸಂಘರ್ಷ ನಡೆಯುತ್ತಿದ್ದ ಸಮಯದಲ್ಲಿ ಇಸ್ರೇಲ್‌ಗೆ ಭೇಟಿ ನೀಡಿದ್ದ ಪ್ರಧಾನಿ ಮೋದಿ, ಇಸ್ರೇಲ್‌ನ ಭದ್ರತೆಗೆ ದೃಢ ಬೆಂಬಲ ವ್ಯಕ್ತಪಡಿಸಿದರು. ಹಮಾಸ್‌ನ ದಾಳಿಯನ್ನು ಖಂಡಿಸಿದರು. ಆದರೆ, ಗಾಜಾದಲ್ಲಿ ಇಸ್ರೇಲ್ ನಡೆಸುತ್ತಿದ್ದ ಭೀಕರ ದಾಳಿ-ಕ್ರೌರ್ಯದ ಬಗ್ಗೆ ತುಟಿಬಿಚ್ಚಲಿಲ್ಲ. ಬದಲಾಗಿ, ಇಸ್ರೇಲ್‌ನೊಂದಿಗೆ ದೃಢವಾದ ರಕ್ಷಣಾ, ತಾಂತ್ರಿಕ ಹಾಗೂ ಆರ್ಥಿಕ ಒಪ್ಪಂದಗಳನ್ನು ಮಾಡಿಕೊಂಡು ಬಂದರು.

ಮೋದಿ ಸರ್ಕಾರವು ಇಸ್ರೇಲ್ ಪರವಾಗಿ ತಳೆದಿರುವ ಈ ಮೌನ ಸಮ್ಮತಿಯ ಧೋರಣೆಯು, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತವು ಹೊಂದಿದ್ದ ಜಾಗತಿಕ ಶಾಂತಿಯ ದೂತ ಮತ್ತು ಅಲಿಪ್ತ ನೀತಿಯ ನಾಯಕ ಎಂಬ ಗೌರವಪೂರ್ಣ ಇಮೇಜ್‌ಗೆ ತೀವ್ರ ಧಕ್ಕೆ ತಂದೊಡ್ಡಿದೆ. ಮಾತ್ರವಲ್ಲ, ಮಧ್ಯಪ್ರಾಚ್ಯದಲ್ಲಿ ಭಾರತ ಹೊಂದಿದ್ದ ಐತಿಹಾಸಿಕ ಸಂಬಂಧಕ್ಕೂ ಕೊಡಲಿ ಪೆಟ್ಟು ನೀಡಿದೆ.

ಆದ್ದರಿಂದ, ಕಾಂಗ್ರೆಸ್ ನಾಯಕ ಸೋನಿಯಾ ಗಾಂಧಿ ಅವರು, ''ಮೋದಿ ಸರ್ಕಾರದ ಮೌನ ಮತ್ತು ನಿಷ್ಕ್ರಿಯತೆಯು ಕೇವಲ ನೈತಿಕವಾಗಿ ಮಾತ್ರವಲ್ಲದೆ, ರಾಷ್ಟ್ರೀಯ ಹಿತಾಸಕ್ತಿಯ ದೃಷ್ಟಿಕೋನದಿಂದಲೂ ಖಂಡನೀಯ. ಪ್ಯಾಲೆಸ್ತೀನ್, ಇರಾನ್ ಹಾಗೂ ಒಟ್ಟಾರೆ ಮಧ್ಯಪ್ರಾಚ್ಯದಂತಹ ನಮ್ಮ ಐತಿಹಾಸಿಕ ಮಿತ್ರರಾಷ್ಟ್ರಗಳಿಂದ ನಾವು ದೂರವಾಗಿದ್ದೇವೆ. ಈ ಪ್ರದೇಶದಲ್ಲಿ ಭಾರತ ಹೊಂದಿದ್ದ ಐತಿಹಾಸಿಕ ಬಾಂಧವ್ಯದ ಕಾರಣದಿಂದಾಗಿ ಪಡೆಯಬಹುದಾಗಿದ್ದ ರಾಜತಾಂತ್ರಿಕ ಮಧ್ಯಸ್ಥಿಕೆಗಾರನ ಸ್ಥಾನವನ್ನು ಪಾಕಿಸ್ತಾನ ಆಕ್ರಮಿಸಿಕೊಳ್ಳಲು ಮೋದಿ ಸರ್ಕಾರ ಅವಕಾಶ ಮಾಡಿಕೊಟ್ಟಿದೆ. ನಮ್ಮ ಕಾರ್ಯತಂತ್ರದ ಹಿತಾಸಕ್ತಿ ಮತ್ತು ನೈತಿಕತೆಯನ್ನು ಬಲಿಕೊಟ್ಟಿರುವುದರ ಹಿಂದೆ ಪ್ರಧಾನಿ ಮೋದಿ ಮತ್ತು ಪ್ರಧಾನಿ ನೆತನ್ಯಾಹು ನಡುವಿನ ವೈಯಕ್ತಿಕ ಸ್ನೇಹದ ಹೊರತಾಗಿ ಬೇರೇನೂ ಇಲ್ಲ'' ಎಂದು ಖಂಡಿಸಿದ್ದಾರೆ.

ಭಾರತವು ಮಧ್ಯಪ್ರಾಚ್ಯದ ಅರಬ್ ರಾಷ್ಟ್ರಗಳು ಮತ್ತು ಇರಾನ್‌ನಂತಹ ದೇಶಗಳೊಂದಿಗೆ ದಶಕಗಳಿಂದ ಅತ್ಯಂತ ಆಪ್ತ ರಾಜತಾಂತ್ರಿಕ ಮತ್ತು ಆರ್ಥಿಕ ಸಂಬಂಧಗಳನ್ನು ಸೌಹಾರ್ದಯುತವಾಗಿ ಕಾಪಾಡಿಕೊಂಡು ಬಂದಿತ್ತು. ಲಕ್ಷಾಂತರ ಭಾರತೀಯರು ಈ ದೇಶಗಳಲ್ಲಿ ಉದ್ಯೋಗ ಮಾಡುತ್ತಾ ದೇಶದ ಆರ್ಥಿಕತೆಗೆ ಬಿಲಿಯನ್ ಗಟ್ಟಲೆ ಕೊಡುಗೆ ನೀಡುತ್ತಿದ್ದಾರೆ. ಆದರೆ, ಇಸ್ರೇಲ್‌ನ ಕ್ರೌರ್ಯದ ವಿಷಯದಲ್ಲಿ ಮೋದಿ ಸರ್ಕಾರ ತೋರುತ್ತಿರುವ ಏಕಪಕ್ಷೀಯ ಇಸ್ರೇಲ್ ಪರ ಧೋರಣೆಯು ಈ ಐತಿಹಾಸಿಕ ಬಾಂಧವ್ಯವನ್ನು ಧೂಳಿಪಟ ಮಾಡುವ ಭೀತಿಯನ್ನು ಮೂಡಿಸಿದೆ.

ಇಡೀ ಅರಬ್ ಜಗತ್ತು ಮತ್ತು ಜಾಗತಿಕ ಸಮುದಾಯವು ಪ್ಯಾಲೆಸ್ತೀನ್ ಜನರ ನೋವಿಗೆ ಮಿಡಿಯುತ್ತಿರುವಾಗ, ಭಾರತವು ಇಸ್ರೇಲ್‌ನ ಕೃತ್ಯಗಳನ್ನು ಖಂಡಿಸದೆ ಮೌನವಾಗಿರುವುದು ಮಧ್ಯಪ್ರಾಚ್ಯದ ನಮ್ಮ ಹಳೆಯ ಮಿತ್ರರಾಷ್ಟ್ರಗಳನ್ನು ನಮ್ಮಿಂದ ದೂರಾಗುವಂತೆ ಮಾಡಿದೆ. ರಾಜತಾಂತ್ರಿಕ ವಲಯದಲ್ಲಿ ಭಾರತವು ಹೊಂದಿದ್ದ ಪ್ರಭಾವಶಾಲಿ ಮತ್ತು ವಿಶ್ವಾಸಾರ್ಹ ಸ್ಥಾನವನ್ನು ಇತರ ದೇಶಗಳು ಬಳಸಿಕೊಳ್ಳಲು ಇದು ದಾರಿ ಮಾಡಿಕೊಟ್ಟಿದೆ. ಕೇವಲ ಒಬ್ಬ ನಾಯಕನೊಂದಿಗಿನ ವೈಯಕ್ತಿಕ ಸ್ನೇಹ ಅಥವಾ ತಾತ್ಕಾಲಿಕ ಹಿತಾಸಕ್ತಿಗಾಗಿ ದಶಕಗಳ ರಾಷ್ಟ್ರೀಯ ಹಿತಾಸಕ್ತಿ ಮತ್ತು ಸಾಂಪ್ರದಾಯಿಕ ಮಿತ್ರರನ್ನು ಕಳೆದುಕೊಳ್ಳುವುದು ದೀರ್ಘಾವಧಿಯಲ್ಲಿ ದೇಶದ ಭದ್ರತೆ ಮತ್ತು ರಾಜತಾಂತ್ರಿಕತೆಗೆ ಹೊಡೆತ ನೀಡಲಿದೆ.

ಇತಿಹಾಸದ ಪುಟಗಳಲ್ಲಿ ಮೌನವೂ ಒಂದು ನಿಲುವಾಗಿ ಪರಿಣಮಿಸುತ್ತದೆ. ಗಾಜಾದಲ್ಲಿ ಅಮಾಯಕರು ಮತ್ತು ಮಕ್ಕಳ ಸಾವುಗಳನ್ನು ಕಣ್ಣಾರೆ ಕಂಡೂ ರಾಜತಾಂತ್ರಿಕತೆ ಹೆಸರಿನಲ್ಲಿ ಮೌನವಾಗಿರುವುದು ಭಾರತದ ನೈತಿಕ ನಾಯಕತ್ವಕ್ಕೆ ಶೋಭೆ ತರುವಂಥದ್ದಲ್ಲ. ಗಾಜಾದ ಮೇಲೆ ಇಸ್ರೇಲ್ ನಡೆಸುತ್ತಿರುವ ದಾಳಿ ಮತ್ತು ಅದಕ್ಕೆ ಮೋದಿ ಸರ್ಕಾರ ತಳೆದಿರುವ ನಿರ್ಲಿಪ್ತ ಮೌನ- ಈ ಎರಡೂ ಇಂದಿನ ಭಾರತದ ನೈತಿಕ ದಿಕ್ಸೂಚಿಯನ್ನು ನಿರ್ಧರಿಸುವ ಅಂಶಗಳಾಗಿವೆ. ಶಕ್ತಿಶಾಲಿಯಾದವರ ಕ್ರೌರ್ಯದಷ್ಟೇ, ಅದನ್ನು ತಡೆಯಬಲ್ಲ ಸಾಮರ್ಥ್ಯವಿದ್ದೂ ಮೌನವಾಗಿರುವವರ ನಿಷ್ಕ್ರಿಯತೆಯೂ ಇತಿಹಾಸದ ಪುಟಗಳಲ್ಲಿ ಅಪರಾಧವೆಂದೇ ಪರಿಗಣಿಸಲ್ಪಡುತ್ತದೆ. ಮಾನವೀಯತೆಯ ಉಳಿವಿಗಾಗಿ ಇಂದಿನ ಜಗತ್ತಿಗೆ ಬೇಕಿರುವುದು ಶಸ್ತ್ರಾಸ್ತ್ರಗಳಲ್ಲ, ಶಾಂತಿ ಮತ್ತು ಜೀವಪರ ಕರುಣೆ ಎಂಬುದನ್ನು ಮೋದಿ ಸರ್ಕಾರ ಅರಿಯಬೇಕಿದೆ. ತನ್ನ ಮೌನ ಮುರಿದು, ಜೀವಪರ ನಿಲುವನ್ನು ತಳೆದು, ಮಾನವೀಯ ನೆರವು ತಲುಪಿಸಲು ಜಾಗತಿಕ ಮಟ್ಟದಲ್ಲಿ ಒತ್ತಡ ಹೇರಬೇಕಿದೆ!

ಗಾಜಾ ನರಮೇಧದ ಬಗ್ಗೆ ಮೋದಿ ಸರ್ಕಾರದ ಮೌನವನ್ನು ಟೀಕಿಸಿದ ಸೋನಿಯಾ

ನವದೆಹಲಿ,ಜೂ.27-

ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಇಸ್ರೇಲ್‌ನ ಗಾಜಾ ನರಮೇಧದ ಬಗ್ಗೆ ಭಾರತ ಸರ್ಕಾರದ ಕಲ್ಲಿನಂತಹ ಮೌನ ಮತ್ತು ನಿಷ್ಕ್ರಿಯತೆ ನೈತಿಕವಾಗಿ ಖಂಡನೀಯ ಮಾತ್ರವಲ್ಲ, ರಾಷ್ಟ್ರೀಯ ಹಿತಾಸಕ್ತಿಯ ದೃಷ್ಟಿಕೋನದಿಂದ ವಿವರಿಸಲಾಗದು ಎಂದು ಶನಿವಾರ ತಮ್ಮ ಅಸಮಾಧಾನವನ್ನು ಹೊರ ಹಾಕಿದ್ದಾರೆ.

ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆಯಾಗಿರುವ ಸೋನಿಯಾ ಗಾಂಧಿ, ಭಾರತವು ಪ್ಯಾಲೆಸ್ಟೈನ್, ಇರಾನ್ ಮತ್ತು ವಿಶಾಲ ಮಧ್ಯಪ್ರಾಚ್ಯದಲ್ಲಿನ ತನ್ನ ಐತಿಹಾಸಿಕ ಮಿತ್ರರಾಷ್ಟ್ರಗಳಿಂದ ದೂರ ಸರಿದಿದೆ. ಜಾಗತಿಕ ಸಾರ್ವಜನಿಕ ಅಭಿಪ್ರಾಯದಿಂದಲೂ ದೂರವಿದೆ ಎಂದಿರುವ ಅವರು, ಪಾಕಿಸ್ತಾನವು ಮಧ್ಯವರ್ತಿಯ ಸ್ಥಾನವನ್ನು ಪಡೆಯಲು ಅವಕಾಶ ಮಾಡಿಕೊಟ್ಟಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ದಿ ಇಂಡಿಯನ್ ಎಕ್ಸ್ ಪ್ರೆಸ್‌ಗಾಗಿ ಬರೆದ ಲೇಖನದಲ್ಲಿ, ಸೋನಿಯಾ ಗಾಂಧಿಯವರು ಇರಾನ್ ಮೇಲೆ ಅಮೆರಿಕ - ಇಸ್ರೇಲ್ ಜಂಟಿ ದಾಳಿಗೆ ಮುಂಚಿತವಾಗಿ ಪ್ರಧಾನಿ ನರೇಂದ್ರ ಮೋದಿಯವರ ಇಸ್ರೇಲ್ ಭೇಟಿ ದಿಗ್ಭ್ರಮೆಗೊಳಿಸುವ ಕಾರ್ಯತಂತ್ರದ ನಿರ್ಧಾರ ಎಂದು ಕರೆದಿದ್ದಾರೆ.

ಭಾರತೀಯ ರಾಷ್ಟ್ರೀಯತೆಯ ಚೈತನ್ಯವು ತಮ್ಮ ಮಕ್ಕಳನ್ನು ಕ್ರೂರವಾಗಿ ಗುರಿಯಾಗಿಸಿಕೊಂಡಿರುವ ಪ್ಯಾಲೆಸ್ಟೀನಿಯನ್ನರ ಪರವಾಗಿ ಮಾತನಾಡಬೇಕೆಂದು ಒತ್ತಾಯಿಸುತ್ತದೆ. ರಾಷ್ಟ್ರೀಯ ಹಿತಾಸಕ್ತಿಯ ಲೆಕ್ಕಾಚಾರವು ಗಾಜಾದಲ್ಲಿ ಇಸ್ರೇಲ್ ಆಡಳಿತದ ಜನಾಂಗೀಯ ಹತ್ಯೆ ಕ್ರಮಗಳು ಮತ್ತು ಆಕ್ರಮಿತ ಪಶ್ಚಿಮ ದಂಡೆಯಲ್ಲಿ ಲಕ್ಷಾಂತರ ಪ್ಯಾಲೆಸ್ಟೀನಿಯನ್ ಕುಟುಂಬಗಳ ಕ್ರೂರ ಸ್ಥಳಾಂತರ ಮತ್ತು ವಿಲೇವಾರಿ ವಿರುದ್ಧ ಜಾಗತಿಕ ಸಾರ್ವಜನಿಕ ಅಭಿಪ್ರಾಯಕ್ಕೆ ಭಾರತ ಪ್ರತಿಕ್ರಿಯಿಸಬೇಕು ಎಂದು ಒತ್ತಾಯಿಸುತ್ತದೆ ಎಂದು ಕಾಂಗ್ರೆಸ್ ನಾಯಕಿ ಹೇಳಿದ್ದಾರೆ.

ಮೋದಿ ಸರ್ಕಾರದ ನಿರಂತರ ಮೌನವನ್ನು ತರ್ಕಬದ್ಧವಾಗಿ ಅಥವಾ ನೈತಿಕವಾಗಿ ವಿವರಿಸಲು ಸಾಧ್ಯವಿಲ್ಲ ಎಂದು ಅವರು ಇದೇ ವೇಳೆ ಕಳವಳ ಹೊರ ಹಾಕಿದ್ದಾರೆ. ಸೆಪ್ಟೆಂಬರ್ 2025 ರಲ್ಲಿ ಆಕ್ರಮಿತ ಪ್ಯಾಲೆಸ್ಟೀನಿಯನ್ ಪ್ರದೇಶದ ಕುರಿತಾದ ವಿಶ್ವಸಂಸ್ಥೆಯ ಸ್ವತಂತ್ರ ಅಂತಾರಾಷ್ಟ್ರೀಯ ವಿಚಾರಣಾ ಆಯೋಗವು ಇಸ್ರೇಲಿ ಅಧಿಕಾರಿಗಳು ಗಾಜಾದಲ್ಲಿ ಪ್ಯಾಲೆಸ್ತೇನಿಯನ್ನರ ವಿರುದ್ಧ ನರಮೇಧವನ್ನು ನಡೆಸುತ್ತಿದ್ದಾರೆ ಎಂದು ತೀರ್ಮಾನಿಸಿದೆ ಎಂಬುದನ್ನು ಲೇಖನದಲ್ಲಿ ನೆನಪಿಸಿಕೊಟ್ಟಿದ್ದಾರೆ.

ಜೂನ್ 2026 ರಲ್ಲಿ ಈಗ ಭಾರತೀಯ ನ್ಯಾಯಶಾಸ್ತ್ರಜ್ಞ ನ್ಯಾಯಮೂರ್ತಿ (ನಿವೃತ್ತ) ಎಸ್ ಮುರಳೀಧರ್ ನೇತೃತ್ವದ ಅದೇ ಆಯೋಗವು, ಇಸ್ರೇಲಿ ಕ್ರಮಗಳು ತಮ್ಮ ಮಕ್ಕಳನ್ನು ಗುರಿಯಾಗಿಸಿಕೊಂಡು ಗಾಜಾದಲ್ಲಿ ಪ್ಯಾಲೆಸ್ತೇನಿಯನ್ನರ ಅಸ್ತಿತ್ವವನ್ನೇ ನಾಶಮಾಡುವ ಉದ್ದೇಶವನ್ನು ಹೊಂದಿವೆ ಎಂದು ಕಟುವಾಗಿ ಪುನರುಚ್ಚರಿಸಿದೆ ಎಂದು ಗಾಂಧಿ ಉಲ್ಲೇಖಿಸಿದ್ದಾರೆ.

94 ಪುಟಗಳ ವರದಿಯು ಗಾಜಾದಲ್ಲಿ ಇಸ್ರೇಲ್ ನಡೆಸಿದ ವಿನಾಶದ ಪ್ರಮಾಣ ಮತ್ತು ಅದರ ಕ್ರಮಗಳಿಗೆ ಆಧಾರವಾಗಿರುವ ಜನಾಂಗೀಯ ಹತ್ಯೆಯ ಉದ್ದೇಶಗಳ ಬಗ್ಗೆ ಕರಾಳ ವಿವರಗಳನ್ನು ನೀಡಿದ್ದು, ಇದನ್ನು ಓದಲು ಕಷ್ಟಕರವಾಗಿದೆ. ಕನಿಷ್ಠ 20,000 ಮಕ್ಕಳು ಸಾವನ್ನಪ್ಪಿದ್ದಾರೆ ಮತ್ತು 44,000 ಮಕ್ಕಳು ಗಾಯಗೊಂಡಿದ್ದಾರೆ. ಅವರಲ್ಲಿ ಅನೇಕರು ಜೀವನ್ಮರಣದ ನಡುವೆ ಹೋರಾಡುತ್ತಿದ್ದಾರೆ ಎಂದು ದುಃಖ ವ್ಯಕ್ತಪಡಿಸಿದ್ದಾರೆ.

ಮಕ್ಕಳನ್ನು ಗುರಿಯಾಗಿಸಿಕೊಂಡಿರುವುದು ಆಕಸ್ಮಿಕವಲ್ಲ, ಆದರೆ, ಉದ್ದೇಶಪೂರ್ವಕ ತಂತ್ರವಾಗಿದೆ ಎಂದು ಗಾಂಧಿ ಪ್ರತಿಪಾದಿಸಿದ್ದಾರೆ. ಕೊಲ್ಲಲ್ಪಟ್ಟ ಅಥವಾ ಗಾಯಗೊಂಡವರಲ್ಲಿ ಇಪ್ಪತ್ತೇಳು ಪ್ರತಿಶತ ಮಕ್ಕಳು ಮತ್ತು ಅನೇಕ ಹುಡುಗರ ತಲೆ ಮತ್ತು ಕುತ್ತಿಗೆಗಳು ಗುಂಡುಗಳಿಂದ ಗಾಯಗೊಂಡಿರುವುದು ಕಂಡುಬಂದಿದೆ. ಗಾಜಾದ ತೊಂಬತ್ತೇಳು ಪ್ರತಿಶತ ಶಾಲೆಗಳು ನಾಶವಾಗಿವೆ ಎಂದು ವರದಿಯಲ್ಲಿ ಹೇಳಲಾಗಿದೆ ಎಂಬುದನ್ನು ಅವರು ತಮ್ಮ ಲೇಖನದಲ್ಲಿ ಪ್ರಸ್ತಾಪಿಸಿದ್ದಾರೆ.

ಮಕ್ಕಳ ಆಸ್ಪತ್ರೆಗಳು ಸೇರಿದಂತೆ ಆರೋಗ್ಯ ಮೂಲಸೌಕರ್ಯಗಳು ನಾಶವಾಗಿವೆ. ಇದರ ಪರಿಣಾಮವಾಗಿ ಗರ್ಭಪಾತ ಮತ್ತು ಹೆರಿಗೆಯ ತೊಂದರೆಗಳು ಶೇಕಡಾ 300 ರಷ್ಟು ಹೆಚ್ಚಾಗಿದೆ ಎಂದು ಗಾಂಧಿ ಹೇಳಿದ್ದಾರೆ.

ಇಸ್ರೇಲ್ ಮೇಲೆ ಹಮಾಸ್ ನಡೆಸಿದ ಭಯಾನಕ, ಭಯಂಕರ ಮತ್ತು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲದ ದಾಳಿಯ ನಂತರದ ಎರಡೂವರೆ ವರ್ಷಗಳಲ್ಲಿ ಇಸ್ರೇಲ್ ಸಶಸ್ತ್ರ



ಪಡೆಗಳು ಮತ್ತು ರಾಜಕೀಯ ನಾಯಕತ್ವದ ಪ್ರತೀಕಾರವು ಅನುಕಂಪದ ಕ್ರೌರ್ಯ ಮತ್ತು ಅನಾಗರಿಕತೆಯಿಂದ ನಿರೂಪಿಸಲ್ಪಟ್ಟಿದೆ ಎಂಬುದು ಸ್ಪಷ್ಟವಾಗಿದೆ ಎಂದು ಅವರು ಹೇಳಿದ್ದಾರೆ.

ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಅವರ ಹಿರಿಯ ಸಂಪುಟ ಸಹೋದ್ಯೋಗಿಗಳಿಂದ ಹಿಡಿದು ಹಿರಿಯ ಇಸ್ರೇಲಿ ನಾಯಕರು ಗಾಜಾದ ಮೇಲಿನ ಸಂಪೂರ್ಣ ಮುತ್ತಿಗೆ ಮತ್ತು ಸಂಪೂರ್ಣ ವಿನಾಶಕ್ಕೆ ಕರೆ ನೀಡಿದ್ದಾರೆ ಎಂಬುದನ್ನು ಸೋನಿಯಾ ಗಾಂಧಿ ತಮ್ಮ ಲೇಖನದಲ್ಲಿ ಉಲ್ಲೇಖಿಸಿದ್ದಾರೆ. ಈ ಸ್ಪಷ್ಟ ಜನಾಂಗೀಯ ಹತ್ಯೆಯ ಉದ್ದೇಶದ ಹೊರತಾಗಿಯೂ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸರ್ಕಾರದ ಬೆಂಬಲವು ಇಸ್ರೇಲ್ ಸರ್ಕಾರವು ಪ್ಯಾಲೆಸ್ತೇನಿಯರ ವಿರುದ್ಧ ತನ್ನ ಕ್ರೂರ ಅಭಿಯಾನವನ್ನು ಮುಂದುವರಿಸಲು ಅನುವು ಮಾಡಿಕೊಟ್ಟಿದೆ ಎಂದು ಅವರು ಹೇಳಿದ್ದಾರೆ.

ಅಮೆರಿಕದ ವಿರೋಧದಿಂದ ವಿಶ್ವಸಂಸ್ಥೆಯು ಯಾವುದೇ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಆದರೆ, ತನ್ನ ಏಜೆನ್ಸಿಗಳ ಮೂಲಕ ಇಸ್ರೇಲ್ ಯುದ್ಧ ಅಪರಾಧಗಳ ದಾಖಲೀಕರಣದಲ್ಲಿ ಅದು ಅದ್ಭುತ ಪಾತ್ರವನ್ನು ವಹಿಸಿದೆ ಎಂದು ಅವರು ಹೇಳಿದರು. ಫ್ರಾನ್ಸ್, ಯುಕೆ, ಕೆನಡಾ ಮತ್ತು ಆಸ್ಟ್ರೇಲಿಯಾ ಸೇರಿದಂತೆ ಪಾಶ್ಚಿಮಾತ್ಯ ಬಣದೊಂದಿಗೆ ಐತಿಹಾಸಿಕವಾಗಿ ಸಂಬಂಧ ಹೊಂದಿರುವ ಪ್ರಮುಖ ಶಕ್ತಿಗಳು - ಪ್ಯಾಲೆಸ್ತೇನ್ ಉದ್ದೇಶದ ಬಗ್ಗೆ ದಶಕಗಳ ಉದಾಸೀನತೆಯ ನಂತರ ಅವರ ರಾಜ್ಯತ್ವವನ್ನು ಗುರುತಿಸಿವೆ ಎಂಬ ಬಗ್ಗೆಯೂ ಕಾಂಗ್ರೆಸ್ ವರಿಷ್ಠೆ ಗಮನ ಸೆಳೆದಿದ್ದಾರೆ.

ವಸಾಹತುಶಾಹಿ ವಿರೋಧಿ ಒಗ್ಗಟ್ಟಿನ ದೀರ್ಘ ಇತಿಹಾಸವನ್ನು ಹೊಂದಿರುವ ದಕ್ಷಿಣ ಆಫ್ರಿಕಾ, 1948ರ ಜನಾಂಗೀಯ ಹತ್ಯೆ ಸಮಾವೇಶದ ಉಲ್ಲಂಘನೆಗಾಗಿ ಇಸ್ರೇಲ್ ಅನ್ನು ಅಂತಾರಾಷ್ಟ್ರೀಯ ನ್ಯಾಯಾಲಯಕ್ಕೆ ಎಳೆದು ತಂದಿದೆ ಎಂಬುದನ್ನು ಸೋನಿಯಾ ಗಾಂಧಿ ಗಮನಿಸಿದ್ದಾರೆ. ಹಲವಾರು ಯುರೋಪಿಯನ್ ರಾಜ್ಯಗಳು ಇಸ್ರೇಲ್‌ಗೆ ಶಸ್ತ್ರಾಸ್ತ್ರ ಮಾರಾಟವನ್ನು ನಿರ್ಬಂಧಿಸಿವೆ ಮತ್ತು ಹಲವಾರು ಲ್ಯಾಟಿನ್ ಅಮೆರಿಕನ್ ರಾಷ್ಟ್ರಗಳು ಆ ದೇಶದೊಂದಿಗಿನ ಸಂಬಂಧವನ್ನು ಕೆಳಮಟ್ಟಕ್ಕಿಳಿಸಿವೆ ಅಥವಾ ಕಡಿದುಕೊಂಡಿವೆ ಎಂದು ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯವು ಇಸ್ರೇಲ್ ರಾಜಕೀಯ ನಾಯಕತ್ವಕ್ಕೆ ಬಂಧನ ವಾರಂಟ್‌ಗಳನ್ನು ಸಹ ಹೊರಡಿಸಿದೆ ಎಂದೂ ಅವರು ಹೇಳಿದ್ದಾರೆ.

ಭಾರತದೊಂದಿಗೆ ನಿಕಟ ಸಂಬಂಧ ಹೊಂದಿರುವ ಹೆಚ್ಚಿನ ಸಂಖ್ಯೆಯ ದೇಶಗಳು ಗಾಜಾದಲ್ಲಿ ಇಸ್ರೇಲ್‌ನ ಕ್ರಮಗಳನ್ನು ನರಮೇಧವೆಂದು ಗುರುತಿಸಿವೆ ಎಂದೂ ಗಾಂಧಿ ಹೇಳುವ ಮೂಲಕ ಗಮನ ಸೆಳೆದಿದ್ದಾರೆ. ಇಸ್ರೇಲ್ ವಿರುದ್ಧ ಹೆಚ್ಚುತ್ತಿರುವ ಸಾರ್ವಜನಿಕ ಪ್ರತಿಕ್ರಿಯೆ ಮತ್ತು ಗಾಜಾದ ಮೇಲೆ ನಡೆದ ಅಸಮರ್ಥನೀಯ ಕ್ರೌರ್ಯದ ಬಗ್ಗೆ ಅಂತಾರಾಷ್ಟ್ರೀಯ ಸಮುದಾಯ ಖಂಡಿಸಿರುವ ನಡುವೆಯೂ, ಭಾರತವು ಮೌನವು ಎದ್ದು ಕಾಣುವಂತಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಸೋನಿಯಾ ಗಾಂಧಿ ಹಿಂದ್ ರಜಬ್ ಅವರ ದುರಂತ ಕಥೆಯನ್ನು ಸಹ ಇದೇ ವೇಳೆ ನೆನಪಿಸಿಕೊಂಡಿದ್ದಾರೆ. ಗಾಜಾದಲ್ಲಿ ಇಸ್ರೇಲ್ ನರಮೇಧದ ಅನಿರ್ವಚನೀಯ ಕ್ರೌರ್ಯದ ಸಂಕೇತವಾಗಿದ್ದಾರೆ ಎಂದು ಹೇಳಿದ್ದಾರೆ. ಇಸ್ರೇಲಿ ಪಡೆಗಳು ತಮ್ಮ ಕಾರಿನ ಮೇಲೆ 335 ಸುತ್ತು ಗುಂಡು ಹಾರಿಸಿದಾಗ, ತನ್ನ ಕುಟುಂಬದೊಂದಿಗೆ ಗಾಜಾ ನಗರದಿಂದ ಪಲಾಯನ ಮಾಡುತ್ತಿದ್ದ ಕೇವಲ ಐದು ವರ್ಷದ ಬಾಲಕಿ, ಆಕೆಯ ಆರು ಕುಟುಂಬ ಸದಸ್ಯರು ಸಾವನ್ನಪ್ಪಿದ್ದರು, ಅರೆವೈದ್ಯರು ಅವಳನ್ನು ರಕ್ಷಿಸಲು ಪ್ರಯತ್ನಿಸುತ್ತಿರುವಾಗ ಆಕೆಯ ಸಂಬಂಧಿಕರ ಮೃತ ದೇಹಗಳೊಂದಿಗೆ ಕಾರಿನಲ್ಲಿ ಸಿಲುಕಿಕೊಂಡಳು . ಅಂತಿಮವಾಗಿ ಆಕೆಯನ್ನು ಇಬ್ಬರು ಅರೆವೈದ್ಯರೊಂದಿಗೆ ಹತ್ಯೆ ಮಾಡಲಾಯಿತು ಎಂಬುದನ್ನು ಅವರು ನೆನಪಿಸಿಕೊಂಡಿದ್ದಾರೆ.

ಮೋದಿ ಸರ್ಕಾರದ ಮೌನ ಮತ್ತು ನಿಷ್ಕ್ರಿಯತೆಯು ನೈತಿಕವಾಗಿ ಖಂಡನೀಯವಾಗಿದೆ. ಮಾತ್ರವಲ್ಲದೇ ರಾಷ್ಟ್ರೀಯ ಹಿತಾಸಕ್ತಿಯ ದೃಷ್ಟಿಕೋನದಿಂದ ವಿವರಿಸಲಾಗದು ಎಂದು ಸೋನಿಯಾ ಗಾಂಧಿ ಕಳವಳ ವ್ಯಕ್ತಪಡಿಸಿದ್ದಾರೆ. ಜಗತ್ತು ಇಸ್ರೇಲ್‌ನಿಂದ ಹೆಚ್ಚು ದೂರ ಸರಿಯುತ್ತಿರುವ ಸಮಯದಲ್ಲಿ, ಭಾರತವು ಅದರ ಕಾರ್ಯತಂತ್ರದ ಕಕ್ಷೆಗೆ ಮತ್ತಷ್ಟು ಜಾರುತ್ತಿದೆ ಎಂದು ಗಾಂಧಿ ಹೇಳಿದ್ದಾರೆ.

ಈ ಸನ್ನಿವೇಶಗಳ ನಡುವೆ ಮತ್ತು ಇರಾನ್ ವಿರುದ್ಧ ಇಸ್ರೇಲ್ ಯುದ್ಧ ಮತ್ತು ಅದರ ಉನ್ನತ ರಾಜಕೀಯ ನಾಯಕತ್ವದ ಹತ್ಯೆಗೆ ಕೆಲವೇ ದಿನಗಳ ಮೊದಲು, ಪ್ರಧಾನ ಮಂತ್ರಿಯವರ ಇಸ್ರೇಲ್ ಭೇಟಿಯು ಇತಿಹಾಸದಲ್ಲಿ ದಿಗ್ಭ್ರಮೆಗೊಳಿಸುವ ಕಾರ್ಯತಂತ್ರದ ನಿರ್ಧಾರ ಎಂದು ದಾಖಲಾಗುತ್ತದೆ ಎಂದು ಗಾಂಧಿ ಕರೆದಿದ್ದಾರೆ.

ನಾವು ಪ್ಯಾಲೆಸ್ಟೈನ್, ಇರಾನ್ ಮತ್ತು ಮಧ್ಯಪ್ರಾಚ್ಯದಲ್ಲಿ ನಮ್ಮ ಐತಿಹಾಸಿಕ ಮಿತ್ರರಾಷ್ಟ್ರಗಳಿಂದ ದೂರವಾಗಿದ್ದೇವೆ. ಜಾಗತಿಕ ಸಾರ್ವಜನಿಕ ಅಭಿಪ್ರಾಯದಿಂದ ನಾವು ದೂರ ಸಾಗಿದ್ದೇವೆ. ಮತ್ತು ಎಲ್ಲಾ ದೇಶಗಳಿಗಿಂತ ಹೆಚ್ಚಾಗಿ, ಭಯೋತ್ಪಾದಕರಿಗೆ ಆಶ್ರಯ ನೀಡುತ್ತಿರುವ ಮತ್ತು ಮುಂದುವರಿಸುತ್ತಿರುವ ಪಾಕಿಸ್ತಾನವು ಮಧ್ಯವರ್ತಿಯ ಜಾಗವನ್ನು ಪಡೆಯಲು ಅವಕಾಶ ಮಾಡಿಕೊಟ್ಟಿದ್ದೇವೆ - ಎಲ್ಲಾ ಪಾಲುದಾರರೊಂದಿಗೆ ನಮ್ಮ ಐತಿಹಾಸಿಕ ಸ್ನೇಹಪರ ಸಂಬಂಧಗಳನ್ನು ನೀಡಿದರೆ ನಮಗೆ ನೈಸರ್ಗಿಕ ಹಕ್ಕು ಇರುತ್ತದೆ ಎಂದು ಸೋನಿಯಾ ಗಾಂಧಿ ಪ್ರತಿಪಾದಿಸಿದ್ದಾರೆ.

ಭಾರತವು ತನ್ನ ಕಾರ್ಯತಂತ್ರದ ಆಸಕ್ತಿ ಮತ್ತು ನೈತಿಕತೆಯನ್ನು ತ್ಯಾಗ ಮಾಡಿರುವುದರಿಂದ ಪ್ರಧಾನಿ ಮೋದಿ ಮತ್ತು ಪ್ರಧಾನಿ ನೆತನ್ಯಾಹು ನಡುವಿನ ಸ್ನೇಹವನ್ನು ಮಾತ್ರ ಗಳಿಸಲು ಸಾಧ್ಯವಾಯಿತು. ಅವರು ಈಗ ಅಮೆರಿಕ ಸೇರಿದಂತೆ ಪ್ರಪಂಚದಾದ್ಯಂತ ದಾಳಿಗೆ ಒಳಗಾಗಿದ್ದಾರೆ ಎಂದು ಗಾಂಧಿ ಲೇಖನದಲ್ಲಿ ನೆನಪಿಸುವ ಪ್ರಯತ್ನ ಮಾಡಿದ್ದಾರೆ.

ನೀಟ್ ಅಕ್ರಮ, ಭ್ರಷ್ಟಾಚಾರದ ಬಗ್ಗೆ ಮಣ್ಣಿನ ಮಗನ ಜಾಣಮೌನ: ಎಚ್‌ಡಿಕೆಗೆ ನೆಟ್ಟಿಗರ ತರಾಟೆ

ನೆಟ್ಟಿಗರ ಬೇಡಿಕೆ ಮತ್ತು ನಿರೀಕ್ಷೆಗಳು ಬಹಳ ಸ್ಪಷ್ಟವಾಗಿವೆ. ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಈ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ಮೃತ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ. ಕುಮಾರಸ್ವಾಮಿ ಅವರು ಕೇವಲ ಅಧಿಕಾರಕ್ಕಾಗಿ ಸುಮ್ಮನಾಗದೆ, ನೀಟ್ ಅಕ್ರಮದ ವಿರುದ್ಧ ಬಲವಾದ ಧ್ವನಿ ಎತ್ತಬೇಕು. ಮೈತ್ರಿ ಸರ್ಕಾರದ ಪಾಲುದಾರರಾಗಿ ಮೌನವಾಗಿರುವುದು ಅಪ್ಪಟ ಜನದ್ರೋಹ ಎಂದು ಕಮೆಂಟ್ ಮಾಡುವ ಮೂಲಕ ನೆಟ್ಟಿಗರು ಎಚ್ಚರಿಸಿದ್ದಾರೆ.

ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ಜನ್ಮದಿನದ ಶುಭಾಶಯ ಕೋರಿ ಮಾಡಿರುವ ಫೇಸ್ಬುಕ್ ಪೋಸ್ಟ್ ಕನ್ನಡಿಗರ ತೀವ್ರ ಆಕ್ರೋಶಕ್ಕೆ ಗುರಿಯಾಗಿದೆ. ನೀಟ್ ಪರೀಕ್ಷೆಯ ಅಕ್ರಮದಿಂದಾಗಿ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಮಂಕಾಗಿರುವ ಈ ಸೂಕ್ಷ್ಮ ಸಂದರ್ಭದಲ್ಲಿ, ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕಾದ ಕೇಂದ್ರ ಸಚಿವರಿಗೆ ಕುಮಾರಸ್ವಾಮಿ ಅವರು ಶುಭ ಹಾರೈಸಿರುವುದು ನೆಟ್ಟಿಗರ ಕೋಪದ ಕಟ್ಟೆಯೊಡೆಯುವಂತೆ ಮಾಡಿದೆ.

ಸಾಮಾಜಿಕ ಜಾಲತಾಣದ



ಕಾಮೆಂಟ್‌ಗಳಲ್ಲಿ ನೆಟ್ಟಿಗರು ಅತ್ಯಂತ ಆತಂಕಕಾರಿ ಅಂಕಿ-ಅಂಶಗಳನ್ನು ಮುಂದಿಟ್ಟಿದ್ದಾರೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಸುಮಾರು 22 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಸಂಪೂರ್ಣವಾಗಿ ಹಾಳಾಗಿದೆ ಎಂದು ನೆಟ್ಟಿಗರು ಕಿಡಿಕಾರಿದ್ದಾರೆ. ಇದಲ್ಲದೆ, ಈ ಅನ್ಯಾಯದಿಂದಾಗಿ ಹತಾಶರಾಗಿ ಸುಮಾರು 15 ರಿಂದ 22 ಅಮಾಯಕ ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬ ಗಂಭೀರ ಆರೋಪವನ್ನು ನೆಟ್ಟಿಗರು ಮಾಡಿದ್ದಾರೆ. ಇಂತಹ ಘೋರ ದುರಂತಕ್ಕೆ ಕಾರಣವಾದ ಇಲಾಖೆಯ ಸಚಿವರನ್ನೇ ಕುಮಾರಸ್ವಾಮಿ ಅವರು ಹೊಗಳುತ್ತಿರುವುದು ವಿಪರ್ಯಾಸ ಎಂದು ಕಟುವಾಗಿ ಟೀಕಿಸಿದ್ದಾರೆ.

ತಮ್ಮನ್ನು ತಾವು ಸದಾ ಮಣ್ಣಿನ ಮಗ ಹಾಗೂ ರೈತರ ಪರ ನಾಯಕ ಎಂದು ಕರೆದುಕೊಳ್ಳುವ ಕುಮಾರಸ್ವಾಮಿ ಅವರ ದ್ವಂದ್ವ ನಿಲುವನ್ನು ನೆಟ್ಟಿಗರು ಕಟುವಾಗಿ ಪ್ರಶ್ನಿಸುತ್ತಿದ್ದಾರೆ. ಹಳ್ಳಿಯ ಬಡ ರೈತರ ಮಕ್ಕಳು ಕಷ್ಟಪಟ್ಟು ಓದಿ ವೈದ್ಯರಾಗುವ ದೊಡ್ಡ ಕನಸು ಕಂಡಿದ್ದರು. ಆದರೆ ಈ ನೀಟ್ ಹಗರಣವು ಆ ರೈತ ಮಕ್ಕಳ ಕನಸನ್ನು ನುಚ್ಚುನೂರು ಮಾಡಿದೆ. ರಾಜ್ಯದ ರೈತರ ಬಗ್ಗೆ ಸದಾ ದನಿ ಎತ್ತುವ ನಾಯಕರು, ರಾಷ್ಟ್ರೀಯ ಸಮಸ್ಯೆಗಳು ಬಂದಾಗೇಕೆ ಮೌನ ವಹಿಸಿದ್ದಾರೆ ಎಂಬುದು ನೆಟ್ಟಿಗರ ಪ್ರಮುಖ ಪ್ರಶ್ನೆಯಾಗಿದೆ.

ಕೇಂದ್ರ ಸರ್ಕಾರದ ಆಡಳಿತದಲ್ಲಿ ಇತ್ತೀಚೆಗೆ ಕೇಳಿಬರುತ್ತಿರುವ ಸಾಲು ಸಾಲು ಭ್ರಷ್ಟಾಚಾರ ಹಾಗೂ ಹಗರಣಗಳ ಬಗ್ಗೆಯೂ ಕುಮಾರಸ್ವಾಮಿ ಅವರ ಜಾಣಮೌನ ನೆಟ್ಟಿಗರ ಆಕ್ರೋಶಕ್ಕೆ ಕಾರಣವಾಗಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕೇವಲ ಒಂದು ಉದಾಹರಣೆಯಷ್ಟೇ; ಕೇಂದ್ರ ಮಟ್ಟದಲ್ಲಿ ನಡೆಯುತ್ತಿರುವ ಇತರೆ ವ್ಯವಸ್ಥಿತ ಅಕ್ರಮಗಳು ಹಾಗೂ ಆಡಳಿತಾತ್ಮಕ ವೈಫಲ್ಯಗಳ ವಿರುದ್ಧ ಹಿಂದೆಲ್ಲಾ ಕಟುವಾಗಿ ಗುಡುಗುತ್ತಿದ್ದ ಇದೇ ನಾಯಕರು, ಇಂದು ಮೈತ್ರಿ ಸರ್ಕಾರದ ಭಾಗವಾಗಿ ಎಲ್ಲದಕ್ಕೂ ಕಣ್ಮುಚ್ಚಿ ಕುಳಿತಿದ್ದಾರೆ. ಭ್ರಷ್ಟಾಚಾರಮುಕ್ತ ಆಡಳಿತದ ಬಗ್ಗೆ ಭಾಷಣ ಮಾಡುತ್ತಿದ್ದ ಅವರು, ಕೇಂದ್ರ ಸರ್ಕಾರದ ಭ್ರಷ್ಟ ವ್ಯವಸ್ಥೆಯ ಲೋಪಗಳನ್ನು ಪ್ರಶ್ನಿಸುವ ಬದಲು ದೋಷಾರೋಪ ಹೊತ್ತ ಸಚಿವರನ್ನೇ ಓಲೈಸುತ್ತಿರುವುದು ಕನ್ನಡಿಗರ ಕೆಂಗಣ್ಣಿಗೆ ಗುರಿಯಾಗಿದೆ.

ಕೇವಲ ರಾಜಕೀಯ ಲಾಭಕ್ಕಾಗಿ ಹಾಗೂ ಅಧಿಕಾರದ ಆಸೆಗಾಗಿ ಕುಮಾರಸ್ವಾಮಿ ಅವರು ತಮ್ಮ ಮೂಲ ತತ್ವ ಸಿದ್ಧಾಂತಗಳನ್ನು ಸಂಪೂರ್ಣವಾಗಿ ಬದಿಗೊತ್ತಿದ್ದಾರೆ ಎಂದು ನೆಟ್ಟಿಗರು ನೇರವಾಗಿ ಆರೋಪಿಸಿದ್ದಾರೆ. ಬೇರೆ ಪಕ್ಷಗಳ ಸರ್ಕಾರಗಳ ಮೇಲೆ ಸದಾ ಮುಗಿಬೀಳುತ್ತಿದ್ದ ಅವರು, ಕೇಂದ್ರದಲ್ಲಿ ಮಂತ್ರಿಯಾದ ಕೂಡಲೇ ತಮ್ಮ ಜವಾಬ್ದಾರಿಯನ್ನು ಮರೆತಿದ್ದಾರೆ. ತಪ್ಪು ಮಾಡಿದ ಸಚಿವರ ರಾಜೀನಾಮೆ ಕೇಳುವ ಬದಲು, ಅವರನ್ನೇ ಸಮರ್ಥಿಸುವ ಕೀಳು ಮಟ್ಟಕ್ಕೆ ಇಳಿದಿರುವುದು ಅವರ ರಾಜಕೀಯ ಅವಕಾಶವಾದಿತನವನ್ನು ಎತ್ತಿ ತೋರಿಸುತ್ತದೆ ಎಂದು ನೆಟ್ಟಿಗರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನೆಟ್ಟಿಗರ ಬೇಡಿಕೆ ಮತ್ತು ನಿರೀಕ್ಷೆಗಳು ಬಹಳ ಸ್ಪಷ್ಟವಾಗಿವೆ. ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಈ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ಮೃತ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ. ಕುಮಾರಸ್ವಾಮಿ ಅವರು ಕೇವಲ ಅಧಿಕಾರಕ್ಕಾಗಿ ಸುಮ್ಮನಾಗದೆ, ನೀಟ್ ಅಕ್ರಮದ ವಿರುದ್ಧ ಬಲವಾದ ಧ್ವನಿ ಎತ್ತಬೇಕು. ಮೈತ್ರಿ ಸರ್ಕಾರದ ಪಾಲುದಾರರಾಗಿ ಮೌನವಾಗಿರುವುದು ಅಪ್ಪಟ ಜನದ್ರೋಹ ಎಂದು ಕಮೆಂಟ್ ಮಾಡುವ ಮೂಲಕ ನೆಟ್ಟಿಗರು ಎಚ್ಚರಿಸಿದ್ದಾರೆ.

ಈ ಘಟನೆಯು ಕುಮಾರಸ್ವಾಮಿಯವರ ಮೇಲಿದ್ದ ವಿಶ್ವಾಸವನ್ನು ತೀವ್ರವಾಗಿ ಕುಗ್ಗಿಸಿದೆ. ಮುಂದಿನ ಚುನಾವಣೆಗಳಲ್ಲಿ ನೆಟ್ಟಿಗರು ಇದಕ್ಕೆ ತಕ್ಕ ಉತ್ತರ ನೀಡಲಿದ್ದಾರೆ ಎಂಬ ಎಚ್ಚರಿಕೆಯನ್ನೂ ಜಾಲತಾಣಿಗರು ಖಡಾಖಂಡಿತವಾಗಿ ನೀಡಿದ್ದಾರೆ. ರೈತರ ಪರ ಎಂದು ಹೇಳಿಕೊಳ್ಳುವ ನಾಯಕರು, ರಾಷ್ಟ್ರಮಟ್ಟದ ಸಮಸ್ಯೆಗಳು ಹಾಗೂ ಹಳ್ಳಿ ಮಕ್ಕಳ ಭವಿಷ್ಯದ ಪ್ರಶ್ನೆ ಎದುರಾದಾಗ ನಿಷ್ಪಕ್ಷಪಾತವಾಗಿ ನ್ಯಾಯದ ಪರ ನಿಲ್ಲಬೇಕೆಂಬುದು ಕನ್ನಡಿಗರ ಹಾಗೂ ಪ್ರಜ್ಞಾವಂತ ನೆಟ್ಟಿಗರ ಒಕ್ಕೊರಲ ಪ್ರಮುಖ ಒತ್ತಾಯವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR